# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 216 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–03–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 216 | Title- Code: KARKAN 28269 | Chitradurga | Date: 14-03-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಾಸಕರ ಕಾರ್ಯಕ್ರಮದಲ್ಲ ವ್ಯಾಪ್ತಿಯ ಅಧಿಕಾರಿಗಳು ಹಾಜರಿರಬೇಕು: ಶಾಸಕ 2

ಮಹಿಳಾ ದಿನಾಚರಣೆ ಅಂಗವಾಗಿ ವಾಸವಿ ಸಂಘದಿಂದ ಉಚಿತ ಮೇವು ವಿತರಣೆ 3

ಪಿಎಂ ಸೂರಜ್ ಪೋರ್ಟಲ್ ಲೋಕಾರ್ಪಣೆ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಕಾಡು ಪ್ರಾಣಿಗಳಿಗೂ ತಟ್ಟಿದ ಬರದ ಭೀಕರತೆ– ಆಹಾರ,ನೀರಿನ ಸಮಸ್ಯೆ

# ನೀರುಣಿಸಿ: ಕಾಡು ಪ್ರಾಣಿ–ಪಕ್ಷಿಗಳ ಜೀವ ಉಳಿಸಿ

» ಮಹದೇವಪುರ ಶಿವಮೂರ್ತಿ




ಪರಶುರಾಂಪುರ: ಮಳೆ ಇಲ್ಲದೆ ಎಲ್ಲ ಕೆರೆ–ಕಟ್ಟೆಗಳು,ಹಳ್ಳ–ಕೊಳ್ಳಗಳು ನೀರಿಲ್ಲದೆ ಒಣಗಿರುವುದರಿಂದ ಕಾಡು ಪ್ರಾಣಿ–ಪಕ್ಷಿಗಳಿಗೂ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ.

ಪರಶುರಾಂಪುರ ಹೋಬಳಿ ವ್ಯಾಪ್ತಿಯಲ್ಲಿ ಪುಟ್ಲಾರಹಳ್ಳಿ ಮೀಸಲು ಅರಣ್ಯ 890 ಹೆಕ್ಟೇರ್, ದೊಡ್ಡಚೆಲ್ಲೂರು ಮೀಸಲು ಅರಣ್ಯ 460 ಹೆಕ್ಟೇರ್,ಓಬನಹಳ್ಳಿ ಮೀಸಲು ಅರಣ್ಯ 383 ಹೆಕ್ಟೇರ್,ಪರುಶುರಾಂಪುರ ಕಾವಲ್ 323 ಹೆಕ್ಟರ್,ಜಾಜೂರು ಮೀಸಲು ಅರಣ್ಯ 809 ಹೆಕ್ಟೇರ್ ಕಾಯ್ದಿಟ್ಟ ಅರಣ್ಯ ಪ್ರದೇಶ ಇದೆ.

ಈ ಮೇಲಿನ ಅರಣ್ಯ ಪ್ರದೇಶದಲ್ಲಿ ಕೃಷ್ಣಾ ಮೃಗ, ಹಂದಿ, ಕರಡಿ,ಮೊಲ, ಜಂಗಲ್ ಮೈನಾ, ಅಡವಿ ಪಾರಿವಾಳ, ಇಂಡಿಯನ್ ರೋಲರ್, ಕಿಂಗ್ ಫಿಶೇರ್, ನರಿ,ಕೌಜುಗ,ತೋಳ ಸೇರಿದಂತೆ ಅನೇಕ ಸರಿಸೃಪ ನವಿಲು ಒಳಗೊಂಡಂತೆ ವಿವಿಧ ಜಾತಿಯ ಪಕ್ಷಿಗಳು ವಾಸವಾಗಿವೆ. ಕಾಡುಳಲ್ಲಿನ ಹಳ್ಳ–ಕೊಳ್ಳ,ಕೆರೆ–ಕಟ್ಟೆಗಳು ಇವುಗಳ ಬಾಯಾರಿಕೆಯನ್ನ ಇಂಗಿಸುತ್ತಿದ್ದವು.ಈ ಬಾರಿ ಮಳೆ ಇಲ್ಲದ ಕಾರಣ ಜಲ ಮೂಲಗಳು ಬತ್ತಿ ಖಾಲಿಯಾಗಿವೆ.ಹನಿ ನೀರು ಹುಡುಕಿಕೊಂಡು ಅನೇಕ ಜಿಂಕೆ, ಕೃಷ್ಣಮೃಗ, ನವಿಲು ರಸ್ತೆಗಳಲ್ಲಿ ಕಂಡುಬರುತ್ತಿವೆ. ಸದ್ಯದ ಸ್ಥಿತಿಯಲ್ಲಿ ಅವುಗಳ ರಕ್ಷಣೆ ಮಾಡುವುದು ಅತಿ ಅವಶ್ಯಕವಾಗಿದೆ.

**ಬೇಕಿದೆ ನೀರು:** ಬರದಿಂದ ಪರಿತಪಿಸುತ್ತಿರುವ ಕಾಡು ಪ್ರಾಣಿಗಳಿಗೆ ಬೇಸಿಗೆ ಮುಗಿಯುವವರೆಗೂ ನೀರು ಒದಗಿಸುವ ಕೆಲಸ ಆಗಬೇಕಾಗಿದೆ. ಈ ಮೂಲಕ ಪ್ರಾಣಿ, ಪಕ್ಷಿಗಳು ನಾಡಿನತ್ತ ಮುಖ ಮಾಡುವುದನ್ನು ತಪ್ಪಿಸಬೇಕಾಗಿದೆ. ಅಲ್ಲದೆ, ಪ್ರಾಣಿಗಳು ರಸ್ತೆಗೆ ಬಂದು ಪ್ರಾಣ ಕಳೆದುಕೊಳ್ಳುವುದನ್ನು ಕೂಡ ಅಧಿಕಾರಿಗಳು ತಪ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ.

ಇಲ್ಲದಿದ್ದರೆ ನೀರು ಹುಡುಕಿಕೊಂಡು ಬಂದು ನಾಯಿಗಳ ದಾಳಿಯಿಂದ ಅಥವಾ ರಸ್ತೆ ಅಪಘಾತದಲ್ಲಿ ಸಾವನ್ನಪ್ಪುವುದು ನಿಶ್ಚಿತವಾಗಿದೆ. ಅರಣ್ಯ ಪ್ರದೇಶಗಳಲ್ಲಿ ಕೃತಕವಾಗಿ ಕೆರೆ, ಚೆಕ್‌ಡ್ಯಾಂ ಹಾಗೂ ಹೊಂಡಗಳಿಗೆ ಟ್ಯಾಂಕರ್ ಮೂಲಕ ನೀರು ಹರಿಸಿ ಪ್ರಾಣಿಗಳ ದಾಹ ಇಂಗಿಸುವ ಕೆಲಸವನ್ನು ಅರಣ್ಯ ಇಲಾಖೆ ಮಾಡಬೇಕಿದೆ.

ಎದುರಾದ ಬರಕ್ಕಿಂತ ಇದೀಗ ಬರದ ಭೀಕರತೆ ಹೆಚ್ಚಿದ್ದು, ಪ್ರಾಣಿ ಪಕ್ಷಿಗಳಿಗೆ ನೀರಿನ ವ್ಯವಸ್ಥೆ ಮಾಡವ ಕಾರ್ಯಕ್ಕೆ ವಿವಿಧ ಸಂಘ, ಸಂಸ್ಥೆಗಳು ಕೂಡ ಶ್ರಮಿಸಬೇಕಾಗಿದೆ. ಮಾನವೀಯತೆ ಆಧಾರದಲ್ಲಾದರೂ ಕೂಡ ಪ್ರಾಣಿಗಳ ಪ್ರಾಣ ಉಳಿಸುವ ಪ್ರಾಮಾಣಿಕ ಪ್ರಯತ್ನ ನಡೆಯಬೇಕು ಎಂಬುದು ಪ್ರಾಣಿ ಪ್ರಿಯರ ಅಳಲು.

> ಪುಟ್ಲೋರಹಳ್ಳಿ ಭಾಗದ ಅರಣ್ಯದಲ್ಲಿರುವ ಹ್ಯಾಂಡ್ ಪಂಪು ರಿಪೇರಿಗೊಳಿಸಿ ಪ್ರಾಣಿ-ಪಕ್ಷಿಗಳಿಗೆ ಕುಡಿಯಲು ನೀರು ನಿಲ್ಲಿಸುವ ಕೆಲಸ ವಾಗುತ್ತಿದೆ.ಜಾಜೂರು ಭಾಗದ ಕರೆಯಲ್ಲಿ ಸ್ವಲ್ಪ ನೀರಿದೆ.ಪರಶುರಾಂಪುರ ಕಾವಲ್, ಓಬನಹಳ್ಳಿ, ದೊಡ್ಡಚೆಲ್ಲೂರು ಭಾಗಗಳ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಕಾಡು ಪ್ರಾಣಿ-ಪಕ್ಷಿಗಳಿಗೆ ನೀರಿನ ಸೌಲಭ್ಯ ಒದಗಿಸಲು ಅನುದಾನ ಲಭ್ಯತೆ ಅನುಸಾರವಾಗಿ ನೀರಿನ ವ್ಯವಸ್ಥೆಗೆ ಕ್ರಮಕೈಗೊಳ್ಳಲಾಗುವುದು.
>
> » ಡಿ.ಬಹುಗುಣ, ಆರ್‌ಎಫ್‌ಓ ಚಳ್ಳಕೆರೆ.

## ಲೋಕಸಭಾ ಚುನಾವಣೆ ರಾಜ್ಯದ 20 ಕ್ಷೇತ್ರಗಳಿಗೆ ಟಿಕೆಟ್ ಘೋಷಣೆ

**ಬಿಜೆಪಿ 2ನೇ ಪಟ್ಟಿ ರಿಲೀಸ್.. ಪ್ರತಾಪ್ ಸಿಂಹ, ಸದಾನಂದಗೌಡ, ನಳೀನ್‌ಗೆ ಕೋಕ್..**

**ಶೋಭಾ ಕ್ಷೇತ್ರ ಬದಲಾವಣೆ.. ಬೊಮ್ಮಾಯಿ, ಸೋಮಣ್ಣ ಇನ್**






» ನವದೆಹಲಿ

ಲೋಕಸಭಾ ಚುನಾವಣೆಗೆ ಬಿ.ಜೆ.ಪಿ ಯ ಎರಡನೇ ಪಟ್ಟಿ ಪ್ರಕಟವಾಗಿದೆ. ರಾಜ್ಯದ ಬಿ.ಜೆ.ಪಿ ಪಾಲಿನ 25 ಕ್ಷೇತ್ರಗಳ ಪೈಕಿ 20 ಕ್ಷೇತ್ರಗಳಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ. ಪ್ರತಾಪ ಸಿಂಹ, ಸದಾನಂದಗೌಡ, ಕಟೀಲ್ ಸೇರಿ ಹಲವು ಹಾಲಿ ಸಂಸದರಿಗೆ ಟಿಕೆಟ್ ಮಿಸ್ ಆಗಿದೆ.

### ಟಿಕೆಟ್ ಪಡೆದವರ ವಿವರ:

| | |
|---|---|
| ಬೆಂಗಳೂರು ಉ- | ಶೋಭಾ ಕರಂದ್ಲಾಜೆ |
| ಬೆಂಗಳೂರು ಕೇಂದ್ರ- | ಪಿ.ಸಿ.ಮೋಹನ್ |
| ಬೆಂಗಳೂರು ದಕ್ಷಿಣ - | ತೇಜಸ್ವಿ ಸೂರ್ಯ |
| ಮೈಸೂರು- | ಯದುವೀರ್ ಒಡೆಯರ್ |
| ಬೆಂಗಳೂರು ಗ್ರಾ.- | ಡಾ.ಮಂಜುನಾಥ್ |
| ತುಮಕೂರು - | ವಿ.ಸೋಮಣ್ಣ |
| ದಾವಣಗೆರೆ - | ಗಾಯತ್ರಿ ಸಿದ್ದೇಶ್ವರ್ |
| ಚಿಕ್ಕೋಡಿ - | ಅಣ್ಣಾ ಸಾಹೇಬ್ ಜೊಲ್ಲೆ |
| ಬಾಗಲಕೋಟೆ - | ಪಿ.ಸಿ.ಗದ್ದಿಗೌಡರ್ |
| ವಿಜಯಪುರ - | ರಮೇಶ್ ಜಿಗಜಿಣಗಿ |
| ಕಲಬುರ್ಗಿ - | ಉಮೇಶ್ ಜಾಧವ್ |
| ಬೀದರ್ - | ಭಗವಂತ್ ಖೂಬಾ |
| ಕೊಪ್ಪಳ - | ಡಾ.ಬಸವರಾಜ್ ಕ್ಯಾವತರ್ |
| ಬಳ್ಳಾರಿ - | ಬಿ.ಶ್ರೀರಾಮುಲು |
| ಹಾವೇರಿ - | ಬಸವರಾಜ ಬೊಮ್ಮಾಯಿ |
| ಧಾರವಾಡ - | ಪ್ರಹ್ಲಾದ್ ಜೋಶಿ |
| ಶಿವಮೊಗ್ಗ - | ಬಿ.ವೈ.ರಾಘವೇಂದ್ರ |
| ದಕ್ಷಿಣ ಕನ್ನಡ- | ಬ್ರಿಜೇಶ್ ಚೌಟ |
| ಚಾಮರಾಜನಗರ - | ಎಸ್.ಬಾಲರಾಜ್ |
| ಉಡುಪಿ | ಕೋಟಾ ಶ್ರೀನಿವಾಸ ಪೂಜಾರಿ |

### ಯಾರಿಗೆ ಟಿಕೆಟ್ ಮಿಸ್..?

| | |
|---|---|
| ಮೈಸೂರು - | ಪ್ರತಾಪ ಸಿಂಹ |
| ಬೆಂಗಳೂರು ಉತ್ತರ - | ಸದಾನಂದಗೌಡ |
| ಉತ್ತರ ಕನ್ನಡ - | ನಳಿನ್ ಕುಮಾರ್ |
| ಕೊಪ್ಪಳ - | ಸಂಗಣ್ಣ ಕರಡಿ |

### ಗ್ರಾಹಕ ಸಂಪರ್ಕ ಮೇಳದಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿಕೆ

# ಆರ್ಥಿಕ ಸಬಲತೆಗೆ ಬಡವರ ಹೆಬ್ಬಾಗಿಲಾಗಬೇಕು ಬ್ಯಾಂಕ್

» ಚಿತ್ರದುರ್ಗ



ಬಡವರು, ಶೋಷಿತ ವರ್ಗಗಳ ಆರ್ಥಿಕಾಭಿವೃದ್ಧಿ ಚಟುವಟಿಕೆಗಳಿಗಾಗಿ ಸಾಲ–ಸೌಲಭ್ಯ ನೀಡುವ ನಿಟ್ಟಿನಲ್ಲಿ ಬ್ಯಾಂಕ್‌ಗಳು ಬಡವರ ಹೆಬ್ಬಾಗಿಲಾಗಬೇಕು. ಬ್ಯಾಂಕ್‌ಗಳು ಬಡವರ ಹೆಬ್ಬಾಗಿಲಾದಾಗ ಮಾತ್ರ ದೇಶದಲ್ಲಿ ಪರಿವರ್ತನೆಯಾಗಲು ಸಾಧ್ಯ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಹಾಗೂ ಸಂಸದರಾದ ಎ.ನಾರಾಯಣಸ್ವಾಮಿ ಅವರು ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಿಎಂ–ಸೂರಜ್ ನ್ಯಾಷನಲ್ ಪೋರ್ಟಲ್‌ನ ಉದ್ಘಾಟನೆ ಹಾಗೂ ಗ್ರಾಹಕ ಸಂಪರ್ಕ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕ ಸಂಪರ್ಕ ಮೇಳದಂತಹ ಕಾರ್ಯಕ್ರಮಗಳು ನಿಂತ ನೀರಾಗಬಾರದು. ತೆರಿಗೆ ಹಣವನ್ನು ಬಡವರ ಮನೆ ಬಾಗಿಲಿಗೆ ಕೊಂಡೊಯ್ಯುವ ಸಂಕಲ್ಪ ಎಲ್ಲ ಸರ್ಕಾರಗಳು, ಜನಪ್ರತಿನಿಧಿಗಳು ಮಾಡಬೇಕು ಎಂದು ಹೇಳಿದರು.ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗಗಳು, ಸಫಾಯಿ ಕರ್ಮಚಾರಿಗಳು ಸೇರಿದಂತೆ ಎಲ್ಲ ವರ್ಗಗಳ ಸಮುದಾಯಕ್ಕೆ ಅವರ ಸ್ವಂತ ವ್ಯವಹಾರಗಳನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರದ ಆರ್ಥಿಕ ಸಹಾಯವನ್ನು ವಿವಿಧ ರಾಜ್ಯಗಳ ಆಯಾ ಬ್ಯಾಂಕ್‌ಗಳ ಮೂಲಕ ಸಾಲ ವಿತರಣೆ ಮಾಡುವ ಪಿಎಂ–ಸೂರಜ್ ಪೋರ್ಟಲ್‌ನ್ನು ದೇಶದ ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟನೆ ಮಾಡಿ ರಾಷ್ಟ್ರದ ಜನತೆಗೆ ಕೇಂದ್ರ ಸರ್ಕಾರದಿಂದ ಶೋಷಿತ ವರ್ಗಕ್ಕೆ ಹಾಗೂ ದಲಿತರಿಗೆ ಇಂದು ರೂ.660 ಕೋಟಿ ಅನುದಾನವನ್ನು ದೇಶದ ಒಟ್ಟು 01 ಲಕ್ಷ ಮಂದಿಗೆ ಆರ್ಥಿಕ ಸಹಾಯದ ಸಾಲಸೌಲಭ್ಯ ವಿತರಣೆ ಮಾಡಿದ್ದಾರೆ ಎಂದು ಹೇಳಿದರು.


ಪುಟ 2


## ಪರಶುರಾಂಪುರ-ಬೆಂಗಳೂರು ಕೆಎಸ್‌ಆರ್ಟಿಸಿ ಬಸ್ಸಿಗೆ ಶಾಸಕ ಟಿ.ರಘುಮೂರ್ತಿ ಹಸಿರು ನಿಶಾನೆ



» ಪರಶುರಾಂಪುರ

ಬಸ್ಸಗಳ ಕೊರತೆಯ ನಡುವೆ ಪರಶುರಾಂಪುರ–ಬೆಂಗಳೂರಿಗೆ ಬೆಳಗಿನ ಜಾವದಲ್ಲಿ ಧರ್ಮಪುರ ಮಾರ್ಗವಾಗಿ ಶಿರಾ ಮೂಲಕ ಬೆಂಗಳೂರಿಗೆ ಬಸ್ಸು ತಲುಪಲಿದ್ದು,ಇದರ ಸದಸುಪಯೋಗವನ್ನ ಪಡೆಯಿರಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.ಗ್ರಾಮದ ಮುಖ್ಯ ವೃತ್ತದಲ್ಲಿ ಬುಧವಾರ ಆಯೋಜಿಸಿದ್ದಾ ಪರಶುರಾಂಪುರ– ಬೆಂಗಳೂರಿಗೆ ನೂತನ ಕೆಎಸ್‌ಆರ್ಟಿಸಿ ಬಸ್ಸು ಆರಂಭಕ್ಕೆ ಹಸಿರು ನಿಶಾನೆ ತೋರಿಸಿ ಮಾತನಾಡಿದರು.ಈಗಾಗಲೆ ಬಸ್ಸುಗಳ ಕೊರತೆಯ ಬಗ್ಗೆ ಸಂಬಂಧಪಟ್ಟ ಸಚಿವರ ಗಮನಕ್ಕೆ ತರಲಾಗಿದೆ ಮುಂದಿನ.ದಿನಗಳಲ್ಲಿ ಅವಶ್ಯವಿರುವ ಎಲ್ಲಾ ಕಡೆಯು ಕೆಎಸ್‌ಆರ್ಟಿಸ್ ಬಸ್ಸು ಸೌಲಭ್ಯವನ್ನ ಒದಗಿಸಲಾಗುವುದು ಎಂದರು.ಈ ವೇಳೆಯಲ್ಲಿ ಚಳ್ಳಕೆರೆ ಡಿಪೋ ಅಧಿಕಾರಿಗಳು,ಗ್ರಾಪಂ ಅಧ್ಯಕ್ಷ ಜಗಲೂರುಸ್ವಾಮಿ,ಉಪಾಧ್ಯಕ್ಷೆ ಸರೋಜಮ್ಮಚಿತ್ತಯ್ಯ,ಗ್ರಾಪಂ ಸದಸ್ಯರು ಹಾಗೂ ಸಾರ್ವಜನಿಕರಿದ್ದರು.

## ಪ್ರಮುಖ ಸುದ್ದಿ

# ಸಂಸದ ಅನಂತಕುಮಾರ್ ಹೆಗ್ಗಡೆ ಬಂಧನಕ್ಕೆ ಆಗ್ರಹ

» ಚಿತ್ರದುರ್ಗ



.ಉತ್ತರ ಕನ್ನಡ ಸಂಸದ ಅನಂತಕುಮಾರ್ ಹೆಗ್ಗಡೆಯವರು ಭಾರತದ ಸಂವಿಧಾನ ತಿದ್ದುಪಡಿ ಬಗ್ಗೆ ಮಾತನಾಡುವುದು ರಾಷ್ಟ್ರದ್ರೋಹದ ಕೆಲಸ ಇವರ ಮೇಲೆ ರಾಷ್ಟ್ರದ್ರೋಹದ ದೂರನ್ನು ದಾಖಲಿಸಿ ಬಂಧಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ. (ಎಂ.ಎಸ್.ಬಣ) ಹಾಗೂ ಚಿತ್ರದುರ್ಗ ನಾಗರೀಕ ಸಮನ್ವಯ ಸಮಿತಿ ರಾಜ್ಯ ಸರ್ಕಾರವನ್ನು ಆಗ್ರಹಿಸುತ್ತದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ. ರಾಜ್ಯ ಪ್ರಧಾನ ಕಾರ್ಯದರ್ಶಿ ಬಾಳೆಕಾಯಿ ಶ್ರೀನಿವಾಸ್ ಅವರು, ಸಂವಿಧಾನ ಶಿಲ್ಪಿ, ಡಾ॥ ಬಾಬಾಸಾಹೇಬ್ ಅಂಬೇಡ್ಕರ್ರವರು ಬರೆದಂತಹ ಭಾರತದ ಸಂವಿಧಾನವನ್ನು ತಿದ್ದುಪಡಿ ಮಾಡಲು ಚುನಾವಣೆಯಲ್ಲಿ ನಾಲ್ಕು ನೂರು ಸೀಟುಗಳು ಬೇಕೆಂದು ಹೇಳಿಕೆ ನೀಡಿರುವ ಉತ್ತರ ಕನ್ನಡ ಸಂಸದ ಅನಂತಕುಮಾರ್ ಹೆಗ್ಗಡೆ ದೇಶಕ್ಕೆ ಸರ್ವಶ್ರೇಷ್ಠ ಸಂವಿಧಾನವನ್ನು ಬರೆದುಕೊಟ್ಟ ಡಾ॥ ಬಾಬಾಸಾಹೇಬ್ ಅಂಬೇಡ್ಕರ್‌ರವರು ದೇಶದ ದಲಿತರು, ಶೋಷಿತರು, ಹಿಂದುಳಿದವರ್ಗ, ಅಲ್ಪಸಂಖ್ಯಾತರು, ಆದಿವಾಸಿಗಳೇ ಹೆಚ್ಚಾಗಿರುವ ಈ ದೇಶದಲ್ಲಿ ಸಂವಿಧಾನವನ್ನು ಬದಲಾವಣೆಯ ಅಥವಾ ತಿದ್ದುಪಡಿಯ ಮಾತನಾಡುವುದು ದೇಶದ್ರೋಹ ಕೃತ್ಯವಾಗಿದ್ದು, ಈ ಪದವನ್ನು ಯಾರೇ ಮಾತನಾಡಿದರೂ ಕೂಡ ಪ್ರಚೋದಕಾರಿ ಶಕ್ತಿಗಳೆಂದು ಪರಿಗಣಿಸಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಬಂಧಿಸಬೇಕೆಂದು ಸಂವಿಧಾನಪರ ಸಂಘಟನೆಗಳು ಆಗ್ರಹಿಸುತ್ತದೆ.ದೇಶದಲ್ಲಿ ವೈದಿಕ ಸಂಸ್ಕೃತಿಯೇ ವಿಜೃಂಭಣೆ ಮಾಡುತ್ತಿದ್ದ ಕಾಲಘಟ್ಟದಲ್ಲಿ, ಸಮಾನತೆ, ಸಹಬಾಳ್ವೆ, ಸಹೋದರತೆ, ಸೌಹಾರ್ದತೆಗೆ ಬೆಲೆಯಿಲ್ಲದಂತಹ ಸಂದರ್ಭದಲ್ಲಿ ಡಾ. ಬಾಬ ಸಾಹೇಬ್ ಅಂಬೇಡ್ಕರವರು ಭಾರತದ ಸಂವಿಧಾನವನ್ನು ರಚಿಸುವ ಮೂಲಕ ಎಲ್ಲರಿಗೂ ಸಮಾನತೆಯನ್ನು ನೀಡಿದ್ದಾರೆ. ತತ್ವ ಆದರ್ಶಗಳಡಿಯಲ್ಲಿ ಸಂವಿಧಾನದ ಪೀಠಿಕೆಯಲ್ಲಿ ಹೇಳುವಂತೆ ದೇಶದ ಪ್ರಜೆಗಳಾದ ನಾವೆಲ್ಲರೂ ಸಮಾನರು ಎಂಬ ಬಹುದೊಡ್ಡ ಸಂದೇಶವನ್ನು ಸಾರಿದಂತಹ ಡಾ। ಬಾಬಾಸಾಹೇಬ್ ಅಂಬೇಡ್ಕರವರಸಂವಿಧಾನವನ್ನುತಿದ್ದುಪಡಿ ಮಾಡುವುದಾಗಿ, ರದ್ದುಪಡಿಸುವುದಾಗಿ ಮೂರ್ಖ ಹೇಳಿಕೆಗಳನ್ನು ನೀಡುವ ಮೂಲಕ ಪ್ರಚಾರವನ್ನು ಪಡೆಯುತ್ತಿರುವ ಸಂಸದ ಅನಂತ್ ಕುಮಾರ್ ಹೆಗ್ಗಡೆ ರವರನ್ನು ತತ್‌ಕ್ಷಣದಿಂದ ಬಂಧಿಸಿ ಜೈಲಿಗಟ್ಟಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಸಮಾಜದ ಸ್ವಾಸ್ಥ್ಯವನ್ನು ಕೆಡಿಸುವಂತಹ ಷಡ್ಯಂತರವನ್ನು ಮಾಡುವ ಸಾಧ್ಯಗಳಿವೆ ಪರಿಗಣಿಸಬೇಕೆಂದು ದಲಿತ ಸಂಘಟನೆಗಳು ಒತ್ತಾಯಿಸುತ್ತವೆ.ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿಅರುಣ್‌ಕುಮಾರ್‌ಮಾತನಾಡಿ, ಪ್ರಜಾಪ್ರಭುತ್ವದ ಬುನಾದಿಯಾಗಿರುವ ಭಾರತದ ಸಂವಿಧಾನ ಈ ದೇಶದ ಜಾತಿ, ಧರ್ಮಗಳಿಗೆ ಸಮಾನತೆಯನ್ನು ಕೊಟ್ಟಂತಹ ಪವಿತ್ರ ಗ್ರಂಥವಾಗಿದ್ದು, ಇದರ ಬಗ್ಗೆ ಹಗುರವಾಗಿ ಮಾತನಾಡುವ ಮೂಲಕ ಪ್ರಚಾರ ಗಿಟ್ಟಿಸಿಕೊಳ್ಳುತ್ತಿರುವ ಅನಂತ್ ಕುಮಾರ್ ಹೆಗ್ಗಡೆ ಮತ್ತು ಅವರ ಪರಿವಾರ ಈ ದೇಶದ ದ್ರೋಹಿಗಳಾಗಿದ್ದು, ಸರ್ಕಾರ ಸುಮೋಟೋ ಕೇಸು ದಾಖಲಿಸಿ ಇವರುಗಳನ್ನು ಜೈಲಿಗಟ್ಟುವ ಅಗತ್ಯವಿದೆ. ಭಾರತದ ಸಂವಿಧಾನದ ಬಗ್ಗೆ ಯಾರೇ ಅವಹೇಳನಕಾರಿಯಾಗಿ ಮಾತನಾಡಿದರೆ ಅಂತಹವರ ವಿರುದ್ಧ ಕಾನೂನುಕ್ರಮ ತೆಗೆದುಕೊಳ್ಳಬೇಕು. ಇಲ್ಲವಾದರೆ ಸಂಘಟನೆಗಳೇ ಈ ಕೃಕೃತ್ಯದ ಹೇಳಿಕೆ ನೀಡುವಂತಹವರ ವಿರುದ್ಧ ದೂರು ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಗೋಷ್ಠಿಯಲ್ಲಿ ರಾಜ್ಯಾಧ್ಯಕ್ಷ ಕುಂಚಿಗನಾಳ್ ಮಹಾಲಿಂಗಪ್ಪ ರಾಜ್ಯ ಉಪಾಧ್ಯಕ್ಷ ಕೆ.ರಾಜಣ್ಣ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳ್ಳಲು ಮತದಾನ ಅಮೂಲ್ಯವಾದದ್ದು: ಡಾ.ಟಿ.ಬಸಪ್ಪ



» **ಹೊಸದುರ್ಗ**

ದೇಶದ ಸುಭದ್ರತೆ, ಉತ್ತಮ ಆಡಳಿತ, ಒಳ್ಳೆಯ ಸರ್ಕಾರದ ರಚನೆ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತಷ್ಟು ಗಟ್ಟಿಗೊಳ್ಳಲೂ, ಚುನಾವಣೆಯಲ್ಲಿ ಚಲಾಯಿಸುವ ಒಂದು ಮತವು ಅತ್ಯಂತ ಅಮೂಲ್ಯವಾಗಿದೆ ಎಂದು ಇಂದಿರಾಗಾಂಧಿ ಬಿ.ಇಡಿ ಕಾಲೇಜಿನ ಪ್ರಾಂಶುಪಾಲ ಡಾ.ಟಿ ಬಸಪ್ಪ ಹೇಳಿದರು. ಪಟ್ಟಣದ ಇಂದಿರಾಗಾಂಧಿ ಬಿ.ಇಡಿ ಕಾಲೇಜಿನಲ್ಲಿ ನೆಹರು ಯುವ ಕೇಂದ್ರ, ಚಿತ್ರದುರ್ಗ ಮತ್ತು ಅಮೃತ ವರ್ಷಿಣಿ ಕಲಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಡೆದ ಯುವ ವಿದ್ಯಾರ್ಥಿ9ಗಳಿಗೆ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿ9ಸಿರುವವರಲ್ಲಿ ಯೋಗ್ಯವಾದ ವ್ಯಕ್ತಿಯನ್ನು ಆಯ್ಕೆ ಮಾಡಲು ಉತ್ತಮ ಸಕಾ9ರ ರಚಿಸಲು ಮತ್ತು ದೇಶದ ಅಭಿವೃದ್ಧಿಗೆ ಮತದಾನ ಮಾಡುವುದು, ದೇಶದ ಪ್ರತಿಯೊಬ್ಬರಕತ9ವ್ಯಮತ್ತು ಜವಾಬ್ದಾರಿಯಾಗಿದ್ದು, ಯಾವುದೇ ಆಮಿಷಗಳಿಗೆ ಬಲಿಯಾದೆ, ಸ್ವತಂತ್ರವಾಗಿ ಮತಚಲಾಯಸಬೇಕು. ಇದರಿಂದಾಗಿ, ಸಂವಿಧಾನದ ಆಶಯ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿಯಬಹುದೆಂದು ಎಂದು ತಿಳಿಸಿದರು. ಎಸ್.ಐ.ಆರ್.ಡಿ.ಸಂಪನ್ಮೂಲ ವ್ಯಕ್ತಿ ಪೀಲಾಪುರ ಆರ್.ಕಂಠೇಶ್ ಮಾತನಾಡಿ, ಉತ್ತಮ ಸಕಾ9ರ ಮತ್ತು ಯೋಗ್ಯ ನಾಯಕರನ್ನು ಆಯ್ಕೆ ಮಾಡಲು ಮತದಾನ ಅತ್ಯಂತ ಅಮೂಲ್ಯವಾಗಿದೆ. ಭಾರತದ ಸಂವಿಧಾನ 18 ವರ್ಷ ತುಂಬಿದ ವಯಸ್ಕರು ಮತದಾನ ಮಾಡಲು ಅವಕಾಶ ಕಲ್ಪಿಸಿದೆ. ಮತದಾನ ಮಾಡುವುದು ದೇಶದ ಪ್ರತಿಯೊಬ್ಬರ ಹಕ್ಕು ಮತ್ತು ಕತ9ವ್ಯವಾಗಿದ್ದು, ಮತವನ್ನು ಯುವ ಜನತೆ ಹೆಂಡ, ಹಣ ಮತ್ತು ಇದರ ಆಮಿಷಗಳಿಗೆ ಬಲಿಯಾಗಿ ಮಾರಿಕೊಳ್ಳದೆ ದೇಶದ ಅಭಿವೃದ್ಧಿಗೆ ಮತದಾನ ಮಾಡಿ ಎಂದು ಸಲಹೆ ನೀಡಿದರು. ಈ ವೇಳೆ ಕಾಯ9ಕ್ರಮವನ್ನು ಅಮೃತ ವಷಿ9ಣಿ ಕಲಾ ಸಂಘದ ಮುಖ್ಯಸ್ಥ ಓ.ಮೂತಿ, ಉಪನ್ಯಾಸಕರಾದ ನೀರಗುಂದ ಸುರೇಶ್, ಭುವನೇಶ್, ಶ್ರೀನಿವಾಸ್ ಮತ್ತು ರೇಖಾ ಸೇರಿದಂತೆ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಇದ್ದರು.

### ಆರ್ಥಿಕ ಸಬಲತೆಗೆ ಬಡವರ ಹೆಬ್ಬಾಗಿಲು ಆಗಬೇಕು ಬ್ಯಾಂಕ್

» **ಮೊದಲ ಪುಟದಿಂದ**

ಬಡವರಿಗಾಗಿ ಕೆಲಸ ಮಾಡುವುದು, ಬಡವರ ಜತೆ ಇರುವುದು ನನಗೆ ಸ್ವರ್ಗ ಇದ್ದಂತೆ ಎಂದು ಹೇಳಿದ ಸಚಿವರು, ಅಧಿಕಾರಿಗಳು ಬಡವರಿಗಾಗಿ ಕೊಡುವ ಯೋಜನೆಗಳನ್ನು ಆದ್ಯತೆ ಮೇರೆಗೆ ತಲುಪಿಸುವ ಕಾರ್ಯ ಮಾಡಬೇಕು. ಬಡವರ ದರ್ಶನ ಅಧಿಕಾರಿಗಳಿಗೆ ಪ್ರಥಮಾದ್ಯತೆಯಾಗಬೇಕು. ಆಗ ಮಾತ್ರದೇಶದಲ್ಲಿಪರಿವರ್ತನೆಯಾಗಲಿದೆ ಎಂದರು. ಇದೇ ಸಂದರ್ಭದಲ್ಲಿ ಚಿತ್ರದುರ್ಗ, ತುಮಕೂರು ಹಾಗೂ ದಾವಣಗೆರೆ ಜಿಲ್ಲೆಯ ಫಲಾನುಭವಿಗಳಿಗೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ವತಿಯಿಂದ ಸಾಲ-ಸೌಲಭ್ಯದ ಮಂಜೂರಾತಿ ಆದೇಶ ಪ್ರತಿ ಸಾಂಕೇತಿಕವಾಗಿ ವಿತರಣೆ ಮಾಡಿದರು.ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಬಳ್ಳಾರಿ ಕೇಂದ್ರ ಕಚೇರಿ ಜನರಲ್ ಮ್ಯಾನೇಜನರ್ ಭಾಗ್ಯರೇಖಾ, ಎನ್‌ಎಸ್‌ಸಿಎಫ್‌ಡಿಸಿ ಸಿಜಿಎಂ ರಮೇಶ್‌ರಾವ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್, ಎನ್‌ಐಸಿ ಅಧಿಕಾರಿ ಕೆಆರ್‌ಕೆ ಶಾಸ್ತ್ರಿ, ದಾವಣಗೆರೆಯ ಕೆನರಾ ಬ್ಯಾಂಕ್ ವಿಭಾಗೀಯ ವ್ಯವಸ್ಥಾಪಕ ಕೆ.ಶ್ರೀನಿವಾಸ್, ಗಣ್ಯರಾದ ಮುರುಳಿ, ಮೀಸೆ ಮಹಲಿಂಗಪ್ಪ ಸೇರಿದಂತೆ ಮತ್ತಿತರರು ಇದ್ದರು.

### ಗುರುತಿಪ್ಪೇರುದ್ರ ಸ್ವಾಮಿ ಜಾತ್ರೆ 200 ಹೆಚ್ಚುವರಿ ಬಸ್ ಕಾರ್ಯಾಚರಣೆ

» **ಚಿತ್ರದುರ್ಗ**

ನಾಯಕನಹಟ್ಟಿ ಶ್ರೀ.ಗುರುತಿಪ್ಪೇರುದ್ರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಮಾ.25 ರಿಂದ 27 ರವರೆಗೆ ಚಿತ್ರದುರ್ಗ, ಚಳ್ಳಕೆರೆ, ಹೊಸದುರ್ಗ ಹಾಗೂ ಪಾವಗಡ ಘಟಕಗಳಿಂದ ಒಟ್ಟು 200 ಜಾತ್ರಾ ವಿಶೇಷ ಬಸ್‌ಗಳು ಕಾರ್ಯಚರಣೆ ನಡೆಸಲಿವೆ. ಚಿತ್ರದುರ್ಗದಿಂದ ನಾಯಕನಹಟ್ಟಿ ತೆರಳುವ ಬಸ್‌ಗಳು ಬೆಳಗಟ್ಟ, ಹಾಯ್ಕಲ್ ಚಳ್ಳಕೆರೆ ಮಾರ್ಗವಾಗಿ, ಚಳ್ಳಕೆರೆ ನಾಯಕನಹಟ್ಟಿ ಬಸ್‌ಗಳು ನೇರ್ಲಗುಂಟೆ ಮಾರ್ಗವಾಗಿ, ಹಿರಿಯೂರು ನಾಯಕನಹಟ್ಟಿ ಬಸ್‌ಗಳು ಸಾಣಿಕೆರೆ, ಚಳ್ಳಕೆರೆ, ನೇರ್ಲಗುಂಟೆ ಮಾರ್ಗವಾಗಿ ಹಾಗೂ ನಾಯಕಹಟ್ಟಿ ಪರುಶುರಾಂಪುರ ಬಸ್‌ಗಳು ಚಳ್ಳಕೆರೆ ಮಾರ್ಗವಾಗಿ ಸಂಚರಿಸಲಿವೆ. ಭಕ್ತಾಧಿಗಳು ಸದುಪಯೋಗ ಪಡೆದುಕೊಳ್ಳುವಂತೆ ಚಿತ್ರದುರ್ಗ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

#### ಸಮಸ್ಯೆ ಸ್ಪಂದನೆಗೆ ಸಹಾಯವಾಣಿ ಪ್ರಾರಂಭ -ಜಿಪಂ ಸಿಇಒ ಎಸ್.ಜೆ. ಸೋಮಶೇಖರ್

# ಕುಡಿಯುವ ನೀರು ಪೂರೈಕೆ ಮೊದಲ ಆದ್ಯತೆ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ತಲೆದೋರಿರುವ ಗ್ರಾಮಗಳಿಗೆ, ತಕ್ಷಣವೇ ಸ್ಪಂದಿಸಿ, ಗ್ರಾಮಗಳ ಜನರಿಗೆ ಕುಡಿಯುವ ನೀರನ್ನು ಒದಗಿಸುವುದು ಆಯಾ ಗ್ರಾಮ ಪಂಚಾಯತಿ ಪಿ.ಡಿ.ಒ ಗಳ ಮೊದಲ ಆದ್ಯತೆ ಆಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಸೂಚನೆ ನೀಡಿದರು.



ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆ ಸಂಬಂಧ ಜಿಲ್ಲಾ ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆಯ ಕೊರತೆ ಹಾಗೂ ಬೇಸಿಗೆ ಹಿನ್ನೆಲೆಯಲ್ಲಿ ಜಿಲ್ಲೆಯ 27 ಗ್ರಾಮ ಪಂಚಾಯತಿಗಳ 56 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ಈ ಪೈಕಿ ಈಗಾಗಲೆ 27 ಗ್ರಾಮಗಳಲ್ಲಿ ಸಮಸ್ಯೆ ತೀವ್ರವಾಗಿದ್ದು, 33 ಗ್ರಾಮಗಳಲ್ಲಿ ಕುಡಿಯುವ ನೀರನ್ನು ಜನರಿಗೆ ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗುತ್ತಿದೆ. 24 ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿ, ಅವರುಗಳನ್ನು ಬಾಡಿಗೆ ಆಧಾರದಲ್ಲಿ ಪಡೆದು, ನೀರು ಪೂರೈಸಲು ಕೂಡ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ಗ್ರಾಮ ಪಂಚಾಯತಿಗಳ ಪಿಡಿಒ ಗಳು ಕುಡಿಯುವ ನೀರಿನ ಪೂರೈಕೆ ಬಗ್ಗೆ ತೀವ್ರ ನಿಗಾ ವಹಿಸುವುದು ಅಗತ್ಯವಾಗಿದೆ.

ನೀರಿನ ಗುಣಮಟ್ಟದ ಬಗ್ಗೆಯೂ ಖಾತ್ರಿ ಪಡಿಸಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ನೀರಿನ ಸಮಸ್ಯೆ ತೀವ್ರವಾಗಿರುವ ಕಡೆಗಳಲ್ಲಿರುವ ಬೋರ್‌ವೆಲ್‌ಗಳು ವಿಫಲವಾಗಿದ್ದಲ್ಲಿ, ಅಂತಹ ಕೊಳವೆಬಾವಿಗಳ ಪುನಶ್ಚೇತನಕ್ಕೆ ಮುಂದಾಗಬೇಕು, ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲು ಕ್ರಮ ವಹಿಸಬೇಕು. ಬಳಿಕವೂ ಸಾಧ್ಯವಾಗದಿದ್ದಲ್ಲಿ ತಕ್ಷಣಕ್ಕೆ ಟ್ಯಾಂಕರ್ ಮೂಲಕ ಸರಬರಾಜು ಮಾಡಬೇಕು. ಹೊಸ ಬೋರ್‌ವೆಲ್ ಕೊರೆಯಿಸುವುದು ಅತ್ಯಂತ ಕೊನೆಯ ಆಯ್ಕೆಯಾಗಿದ್ದು, ಇದಕ್ಕಾಗಿ ನೀರಿನ ಲಭ್ಯತೆ ಬಗ್ಗೆ ಭೂವಿಜ್ಞಾನಿಗಳ ಅಭಿಪ್ರಾಯ ಅತ್ಯಂತ ಅಗತ್ಯವಾಗಿದೆ ಎಂದು ಸೂಚನೆ ನೀಡಿದರು.

ಗ್ರಾಮೀಣ ಪ್ರದೇಶಗಳ ಜನರಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸುವುದು ಗ್ರಾಮ ಪಂಚಾಯತಿಗಳ ಮೊದಲ ಆದ್ಯತೆ ಆಗಿದೆ. ಯಾವುದೇ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಬಗ್ಗೆ ದೂರುಗಳು ಬಂದಲ್ಲಿ, ತಕ್ಷಣ ಸ್ಪಂದಿಸಿ, ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಕುಡಿಯುವ ನೀರಿನ ಬಗ್ಗೆ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಕಚೇರಿಗಳಲ್ಲಿ 24*7 ಸಹಾಯವಾಣಿಯನ್ನುಪ್ರಾರಂಭಿಸಲಾಗಿದೆ. ಸಹಾಯವಾಣಿಗಳಿಗೆ ಬರುವ ಸಾರ್ವಜನಿಕರ ಕರೆಗಳಿಗೆ ಸ್ಪಂದಿಸಿ, ಅವರ ಕುಂದು - ಕೊರತೆಗಳನ್ನು ಅದರಲ್ಲೂ ಪ್ರಮುಖವಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ತುರ್ತಾಗಿ ಪರಿಹರಿಸಲು ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸಬೇಕು. ಯಾವುದೇ ಬಗೆಯ ಉದಾಸೀನತೆ ತೋರಿದಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಹಾಯವಾಣಿ ಪ್ರಾರಂಭ: ಜಿಲ್ಲಾ ಪಂಚಾಯತ್ ಕಚೇರಿ-08194-200040. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಚಿತ್ರದುರ್ಗ-08194-200041. ತಾಲ್ಲೂಕು ಪಂಚಾಯತ್ ಚಿತ್ರದುರ್ಗ- 08194-230232. ಚಳ್ಳಕೆರೆ-8792228043. ಹಿರಿಯೂರು-9480861112. ಹೊಳಲ್ಕೆರೆ-9538812986. ಹೊಸದುರ್ಗ: 08199-295024. ಮೊಳಕಾಲ್ಮುರು: 08198-229122. ಗ್ರಾಮೀಣ ಪ್ರದೇಶದ ಸಾರ್ವಜನಿಕರು, ಕುಡಿಯುವ ನೀರಿನ ಸಮಸ್ಯೆ ಇದ್ದಲ್ಲಿ ಸಹಾಯವಾಣಿಗೆ ಕರೆ ಮಾಡಿ ದೂರು ಹಾಗೂ ಮಾಹಿತಿ ಸಲ್ಲಿಸಬಹುದಾಗಿದೆ.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ. ತಿಮ್ಮಪ್ಪ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರಾದ ಬಸವನಗೌಡ ಪಾಟೀಲ್, ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ಎಲ್ಲ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪಿಡಿಒ ಗಳು ಕೂಡ ವಿಡಿಯೋ ಸಂವಾದ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

## ಶಾಸಕರ ಕಾರ್ಯಕ್ರಮದಲ್ಲಿ ವ್ಯಾಪ್ತಿಯ ಅಧಿಕಾರಿಗಳು ಹಾಜರಿರಬೇಕು: ಶಾಸಕ ಟಿ.ರಘುಮೂರ್ತಿ ಸೂಚನೆ

» **ಪರಶುರಾಂಪುರ**

ಬರಗಾಲವಿರುವುದರಿಂದ ಸರಕಾರಿ ಕಾರ್ಯಕ್ರಮ ಇಲ್ಲವೇ ಗ್ರಾಪಂಗಳಿಗೆ ಭೇಟಿ ನೀಡುವ ಕಾರ್ಯಕ್ರಮಗಳಲ್ಲೂ ಶಾಸಕರ ಜತೆ ವ್ಯಾಪ್ತಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಿರಬೇಕು ಎಂದು ಸಣ್ಣ ಕೈಗಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ ತಿಳಿಸಿದರು.



ಗ್ರಾಮದ ಗ್ರಾಪಂ ಆವರಣದಲ್ಲಿ ಬುಧವಾರ ಆಯೋಜಿಸಿದ್ದ ಅಮೃತ ಗ್ರಾಮ ಪಂಚಾಯಿತಿ ಯೋಜನೆಯ ಸಾಮಗ್ರಿ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರಕಾರದಿಂದ ಹಣ ವ್ಯಯವಾದಲ್ಲಿ ಯೋಜನೆಗಳು ಸಾಕಾರಗೊಳ್ಳುತ್ತಾ,ಅದರ ಸದುಪಯೋಗಬೇಕು ಹಾಗೂ ಕಾಯ್ದೆಗಳನ್ನ ಮುರಿಯದೆ ಸಾರ್ವಜನಿಕರಿಗೆ ಅನುಕೂಲಗಳನ್ನ ಕಲ್ಪಿಸಬೇಕು ಎಂದರು.

ಪರಶುರಾಂಪುರ-ಸಾಣಿಕೆರೆ ಗ್ರಾಪಂಗಳು ದೊಡ್ಡ ಗ್ರಾಪಂ ಗಳಾಗಿದ್ದು,ಇದಕ್ಕೆ ವಿಶೇಷವಾದ ಕಾಳಜಿಯಲ್ಲಿ ರಾಜ್ಯ ಸರಕಾರವು 25ಲಕ್ಷ ಅನುದಾನವನ್ನ ನೀಡಲಾಗಿದೆ ಇದನ್ನ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಪ್ರಶಾಸ್ತ್ಯವಹಿಸಿ ಬಳಸಿ ಅದರ ನಡುವೆ ಸರಕಾರದ ಐದು ಗ್ಯಾರಂಟಿಗಳ ಸದುಪಯೋಗ ಪಡೆಯುವಂತೆ ತಿಳಿಸಿದರು.

ಈ ವೇಳೆಯಲ್ಲಿ ಅಂಗನವಾಡಿ,ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳ ಜತೆ ಲೈಬರಿಗೆ ಪುಸ್ತಕ,ಸ್ಮಾರ್ಟ್ ಕ್ಲಾಸ್‌ಗೆ ಸಂಬಂಧಿಸಿದ ಇನ್ನಿತರ ಸಾಮಾಗ್ರಿಗಳನ್ನ ವಿತರಿಸುವ ಕಾರ್ಯಕ್ರಮ ಸಾಂಕೇತಿಕವಾಗಿ ಜರುಗಿತು.ಇದಕ್ಕೂ ಮೊದಲು ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣದ ಸೌಲಭ್ಯ ಪಡೆದ ಫಲಾನುಭವಿಗಳಿಗೆ ಮೋಟರ್-ಪಂಪು ಹಾಗೂ ಪೈಪ್‌ಗಳನ್ನ ವಿತರಿಸಲಾಯಿತು.

ಗ್ರಾಪಂ ಅಧ್ಯಕ್ಷ ಜಗಲೂರು ಸ್ವಾಮಿ, ಉಪಾಧ್ಯಕ್ಷೆ ಸರೋಜಮ್ಮ,ಸದಸ್ಯರಾದ ನಾಗಭೂಷಣ್,ಓಬಳೇಶ್,ರಾಮಣ್ಣ,ಕೆಡಿಪಿ ಸದಸ್ಯ ರಂಗಸ್ವಾಮಿ,ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಶಶಿಧರ,ಮುಖಂಡರಾದ ಚಿನ್ನಕೇಶವ,ದೇವರಾಜು,ಪ್ರಸನ್ನಕುಮಾರ,ಕರಿಯಣ್ಣ,ಜಯಕುಮಾರ್,ಅನಿಲ್,ರವಿ,ಪಿಡಿಓ ಗುಂಡಪ್ಪ ಸೇರಿದಂತೆ ಗ್ರಾಪಂ ಸದಸ್ಯರು ಹಾಗೂ ಮುಖಂಡರು,ಕಾರ್ಯಕರ್ತರಿದ್ದರು.



**ಮೈಸೂರಿನ ಪುರಭವನದಲ್ಲಿ ದಲಿತ ಸಂಘರ್ಷ ಸಮಿತಿ ಆಯೋಜಿಸಿದ್ದ ಬಸವಣ್ಣ, ಅಂಬೇಡ್ಕರ್ ಹಾಗೂ ಕುವೆಂಪು ಆಶಯದ ಅಸ್ಪೃಶ್ಯತೆ ಅಳಿಯಲಿ ಮನುಷ್ಯತ್ವ ಉಳಿಯಲಿ ಶೀರ್ಷಿಕೆಯ ಜಿಲ್ಲಾ ಮಟ್ಟದ ವಿಚಾರ ಸಂಕೀರ್ಣವನ್ನು ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು.**
**ಈ ಸಂದರ್ಭದಲ್ಲಿ ಮಾಜಿ ಮೇಯರ್ ಪುರುಷೋತ್ತಮ್, ದಾವಣಗೆರೆ ವಕೀಲರಾದ ಎಸ್. ವಿ.ಪಾಟೀಲ್ ದಸಂಸ ಮುಖಂಡರಾದ ಎಸ್.ಸಿ. ಬಸವರಾಜು, ದೇವಪ್ಪ ದೇವರಮನಿ, ಮುನಿರಾಜು, ರಾಜ್ ಶೇಖರ್, ತುಕಾರಾಮ್, ರಾಕೇಶ್ ಸೇರಿದಂತೆ ಇತರರು ಇದ್ದರು.**

## ಬೀದಿ ಬದಿ ವ್ಯಾಪಾರಸ್ಥರಿಗೆ ಆಹಾರ ಸುರಕ್ಷತ್ತೆ, ಗುಣಮಟ್ಟ ಕುರಿತು ಅರಿವು

### ಬಣ್ಣ ಹಾಕಿದ ಗೋಬಿ ಮಂಚೂರಿಗೆ ನಿಷೇಧ




» **ಚಿತ್ರದುರ್ಗ**

ಬೀದಿ ಬದಿಯಲ್ಲಿ ಸುರಕ್ಷತೆ ಹಾಗೂ ಗುಣಮಟ್ಟವಲ್ಲದ ಆಹಾರ ತಯಾರಿಸಿ ವಿತರಿಸುವುದು ನಿಯಮ ಬಾಹಿರವಾಗಿದ್ದು, ಪ್ರತಿಯೊಬ್ಬರೂ ಆಹಾರ ಸುರಕ್ಷತೆ ಕಾಯ್ದೆಯಡಿ ನೊಂದಣಿ ಮಾಡಿಸುವುದು ಕಡ್ಡಾಯವಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತಾಧಿಕಾರಿ ಡಾ. ಪಾಲಾಕ್ಷ ಅವರು ಹೇಳಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕುರಿತಂತೆ ಬೀದಿ ಬದಿ ವ್ಯಾಪಾರಸ್ಥರಿಗೆ ಅರಿವು ಮೂಡಿಸಲು ನಗರಸಭಾ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಬೀದಿ ಬದಿಗಳಲ್ಲಿ ಸೂಕ್ತ ರಕ್ಷಣಾ ವ್ಯವಸ್ಥೆ ಮತ್ತು ಗುಣಮಟ್ಟವಲ್ಲದ ಆಹಾರ ತಯಾರಿಸಿ ನೀಡುವುದರಿಂದ ಜನರ ಆರೋಗ್ಯದ ಮೇಲೆ ತೀವ್ರ ದುಷ್ಪರಿಣಾಮ ಬೀರುವ ಸಾಧ್ಯತೆಗಳಿರುತ್ತವೆ. ರಾಜ್ಯ ಸರ್ಕಾರವು ಕೂಡ ಇತ್ತೀಚೆಗೆ ಗೋಭಿ ಮಂಚೂರಿಗೆ ಬಣ್ಣ ಹಾಕುವುದನ್ನು ನಿಷೇಧಿಸಿದ್ದು, ಗೋಭಿ ಮಂಚೂರಿಗೆ ಬಣ್ಣ ಹಾಕಿ ನೀಡಿದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. ಜಿಲ್ಲೆಯಲ್ಲಿ ಆಹಾರ ತಯಾರಿಸಿ ನೀಡುವಂತಹ ಪ್ರತಿಯೊಬ್ಬ ಬೀದಿ ಬದಿ ವ್ಯಾಪಾರಸ್ಥರು ಕೂಡ ಆಹಾರ ಸುರಕ್ಷತೆ ಕಾಯ್ದೆಯಡಿ ನೊಂದಣಿ ಹಾಗೂ ಪರವಾನಿಗಿ ಪಡೆಯುವುದು ಕಡ್ಡಾಯವಾಗಿದೆ. ತಪ್ಪಿದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತಾಧಿಕಾರಿ ಡಾ. ಪಾಲಾಕ್ಷ ಅವರು ಹೇಳಿದರು ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತೆ ರೇಣುಕಾ, ಸಮುದಾಯ ಸಂಘಟಕರಾದ ಕೆಂಚಪ್ಪ, ನಗರಸಭೆ ಪರಿಸರ ಅಭಿಯಂತರ ವಾಸಿಂ ಜಾಫರ್ ಉಪಸ್ಥಿತರಿದ್ದರು. ನಗರದ ಬೀದಿ ಬದಿ ವ್ಯಾಪಾರಸ್ಥರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

#### ತರೀಕೆರೆ ಜನರಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಮನವಿ

# ಹೊಸದುರ್ಗ ತಾಲೂಕಿನ ಜನರಿಗೆ ಜೀವಜಲ ಕೊಡಿ

» **ಹೊಸದುರ್ಗ**

2013 ರಿಂದ 2018 ರ ಅವಧಿಯಲ್ಲಿದ್ದ ಸಿದ್ದರಾಮಯ್ಯನವರ ಸರ್ಕಾರದಲ್ಲಿ ತರೀಕೆರೆ, ಅಜ್ಜಂಪುರ ಮತ್ತು ಹೊಸದುರ್ಗ ತಾಲೂಕಿನ ಎಲ್ಲಾ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವ ಯೋಜನೆ ಇದಾಗಿದ್ದು, ನಂತರ ಬಂದ ಬಿಜೆಪಿ ಸರ್ಕಾರ ಯೋಜನೆ ಬದಲಾಯಿಸಿತು. 342 ಹಳ್ಳಿಗಳಿಗೆ ನೀರು ಪೂರೈಸುವ ಯೋಜನೆಗೆ ಇದೀಗ, ಭೂಮಿ ಪೂಜೆ ಸಲ್ಲಿಸಿದ್ದೇವೆ. ಈಗಾಗಲೇ, 50 ಕಿ.ಮೀ ಪೂರ್ಣಗೊಂಡಿದ್ದು, ಇನ್ನೂ 25 ಕಿ.ಮೀ ಕೆಲಸದ ಕಾಮಗಾರಿ ಬಾಕಿಯಿದ್ದು, ಒಂದು ವರ್ಷದೊಳಗೆ ಕೆಲಸ ಪೂರ್ಣಗೊಳ್ಳಲಿದೆ. ತರೀಕೆರೆಯ ಜನರು ದಯವಿಟ್ಟು ನಮಗೆ ಜೀವಜಲ ಕೊಡಿ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಮನವಿ ಮಾಡಿದರು.



ತರೀಕೆರೆ ತಾಲ್ಲೂಕಿನ ಲಕ್ಕವಳ್ಳಿ ಜಲಾಶಯದ ಸಮೀಪ ತರೀಕೆರೆ ಮತ್ತು ಅಜ್ಜಂಪುರ ತಾಲ್ಲೂಕಿನ 172 ಗ್ರಾಮಗಳಿಗೆ, ಹೊಸದುರ್ಗ ತಾಲೂಕಿನ ಎಲ್ಲಾ ಗ್ರಾಮಗಳಿಗೆ ಶುದ್ಧ ನೀರು ಪೂರೈಸುವ 249 ಕೋಟಿ ರೂ.ವೆಚ್ಚದಲ್ಲಿ ನೀರು ಶುದ್ಧೀಕರಣ ಘಟಕದ ಶಂಕುಸ್ಥಾಪನೆಗೆ ಬುಧವಾರ ಶಾಸಕರಾದ ಬಿ.ಜಿ.ಗೋವಿಂದಪ್ಪ ಮತ್ತು ಶ್ರೀನಿವಾಸ್ ಭೂಮಿ ಪೂಜೆ ಸಲ್ಲಿಸಿ, ಮಾತನಾಡಿದರು.

ಹೊಸದುರ್ಗ ಮತ್ತು ತರೀಕೆರೆ ತಾಲೂಕುಗಳೆರಡು ಗಡಿಹೊಂದಿಕೊಂಡಿವೆ. ತರೀಕೆರೆ ಮತ್ತು ಹೊಸದುರ್ಗ ತಾಲೂಕಿನ ಎಲ್ಲಾ ಗ್ರಾಮಗಳಿಗೆ ಶುದ್ಧ ಕುಡಿಯುವ ಕೊಡಬೇಕೆಂಬುದು ನಮ್ಮ ಬಹುದಿನದ ಆಸೆಯಾಗಿದ್ದು, ರೈತರು ಯೋಜನೆಯ ಕಾಮಗಾರಿಗೆ ಪೂರ್ಣಗೊಳ್ಳಲು ಸಹಕರಿಸಿ. ಭದ್ರಾ ಜಲಾಶಯದಿಂದ ಹೊಸದುರ್ಗಕ್ಕೆ75 ಕಿ.ಮೀ ಇದ್ದು, ಇದೀಗ, 50 ಕಿ.ಮೀ ವರೆಗೆ ಕಾಮಗಾರಿ ನಡೆದಿದೆ. ಇನ್ನುಳಿದ 25 ಕಿ.ಮೀ ಕೆಲಸ ಆದಷ್ಟು ಬೇಗವೇ ಮುಗಿಯಬೇಕಿದೆ. ಇದೇ ವರ್ಷದೊಳಗೆ ಕೆಲಸ ಪೂರ್ಣಗೊಂಡು, ಹಳ್ಳಿಗಳಿಗೆ ನೀರು ಬರಲಿದೆ ಎಂದು ಹೇಳಿದರು.

ತರೀಕೆರೆ ಶಾಸಕ ಶ್ರೀನಿವಾಸ್ ಮಾತನಾಡಿ, ಹೊಸದುರ್ಗ ಮತ್ತು ತರೀಕೆರೆ ತಾಲೂಕಿನ ಜನರು ಸಂತೋಷ ಪಡುವ ದಿನ. 2013 ರಿಂದ 2018 ರವರೆಗಿನ ಅವಧಿಯಲ್ಲಿ ಸಿಎಂ ಸಿದ್ಧರಾಮಯ್ಯ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವ ಯೋಜನೆಗೆ ಅನುಮೋದನೆ ನೀಡಿದ್ದರು. ಹೊಸದುರ್ಗ ತಾಲೂಕಿನ 172 ಗ್ರಾಮಗಳಿಗೆ ನೀರು ಕೊಡುವ ಯೋಜನೆ ಇದಾಗಿದೆ. ನಮ್ಮ ಮಾವನವರು (ಗೋವಿಂದಪ್ಪ) ಈ ಯೋಜನೆ ಅನುಷ್ಠಾನಕ್ಕೆ ಮೊದಲು ಪ್ರಯತ್ನಿಸಿದ್ದರು. 283.ಕೋಟಿ ರೂ. ಮೊತ್ತದ ಕಾಮಗಾರಿ ಇದಾಗಿದ್ದು, 2024 ರೊಳಗೆ 2 ತಾಲ್ಲೂಕಿನ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರು ಹೋಗಲಿದೆ. 7 ದಿನದ 24 ಗಂಟೆಯೂ ಜನರಿಗೆ ನೀರು ಕೊಡಲಾಗುವುದು. 1. 1/2 ಟಿಎಂಸಿ ನೀರು ಸಿಗಲಿದೆ ಎಂದು ತಿಳಿಸಿದರು.

ಈ ವೇಳೆ ತರೀಕೆರೆ ಮತ್ತು ಹೊಸದುರ್ಗ ಪುರಸಭೆ ಸದಸ್ಯರು, ಅಧಿಕಾರಿಗಳು, ಸ್ಥಳೀಯ ರೈತರಿದ್ದರು.

## ಫಾಸ್ಟ್ ನ್ಯೂಸ್

### ಮಾ.16 ರಂದು ವಿವಿಧ ಜಯಂತಿ ಪೂರ್ವಸಭೆ

» **ಚಿತ್ರದುರ್ಗ**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾರ್ಚ್ 16 ರಂದು ವಿವಿಧ ಜಯಂತಿ ಪೂರ್ವಭಾವಿ ಸಭೆಗಳು ಜರುಗಲಿವೆ. ಬೆಳಿಗ್ಗೆ 11 ಗಂಟೆಗೆ ಶ್ರೀ ರೇಣುಕಾಚಾರ್ಯ ಜಯಂತಿ, 12 ಗಂಟೆಗೆ ಶ್ರೀ.ಯೋಗಿನಾರೆಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿ ಹಾಗೂ ಮಧ್ಯಾಹ್ನ 12:30ಕ್ಕೆ ಶ್ರೀ.ಅಗ್ನಿಬನ್ನಿರಾಯ ಜಯಂತಿ ಪೂರ್ವ ಸಿದ್ಧತೆ ಕುರಿತು ಸಭೆಗಳು ನಡೆಯಲಿವೆ. ಸಮಾಜದ ಹಿರಿಯ ಮುಖಂಡರು, ಗಣ್ಯರು, ಸಾರ್ವಜನಿಕರು ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಆಯುಷ್ ಅಧಿಕಾರಿಯಾಗಿ ಡಾ. ಯೋಗೇಂದ್ರ ಕುಮಾರ್

» **ದಾವಣಗೆರೆ**

ಚನ್ನಗಿರಿ ತಾಲ್ಲೂಕಿನ ಮೆದಿಕೆರೆಯ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಉಪಮುಖ್ಯ ವೈದ್ಯಾಧಿಕಾರಿ ಡಾ.ಯೋಗೇಂದ್ರಕುಮಾರ್.ಬಿ.ಯ ಂ ಅವರು ದಾವಣಗೆರೆ ಜಿಲ್ಲಾ ಆಯುಷ್ ಅಧಿಕಾರಿ ಹುದ್ದೆಯ ಪ್ರಭಾರವನ್ನು ಮಾರ್ಚ್ 2 ರಿಂದ ವಹಿಸಿಕೊಡಿದ್ದಾರೆ.

### ಜಿಲ್ಲಾ ತಂಬಾಕು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

» **ದಾವಣಗೆರೆ**

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮನ್ವಯ ಸಮಿತಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು. ಎಸ್.ಬಳ್ಳಾರಿ ಅವರ ಅಧ್ಯಕ್ಷತೆಯಲ್ಲಿ ಮಾರ್ಚ್ 15 ರಂದು ಬೆಳಿಗ್ಗೆ 11.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

### ಪ್ರಧಾನಮಂತ್ರಿ ಗ್ರಾಮ ಸಡಕ್ ಗುಣನಿಯಂತ್ರಣ ಪರೀಕ್ಷೆ

» **ದಾವಣಗೆರೆ**

ರಾಷ್ಟ್ರೀಯ ಗುಣ ನಿಯಂತ್ರಣ ಮಾನಿಟರ್ ಸುನೀಲ್ ಕುಮಾರ್ ಬಿಹಾರ್, ಅವರು ಮಾರ್ಚ್ 16 ರಿಂದ 20 ರವರೆಗೆ ದಾವಣಗೆರೆ ಜಿಲ್ಲೆಗೆ ಆಗಮಿಸಲಿದ್ದಾರೆ. ಇವರು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಂತ-3 ರಡಿಯಲ್ಲಿ ನಿರ್ಮಾಣ ಮಾಡಿದ ಕಾಮಗಾರಿಗಳ ಪರಿವೀಕ್ಷಣೆ ಮಾಡಲಿದ್ದಾರೆ. ಸಾರ್ವಜನಿಕರು ಮಾ.20 ರಂದು ಇವರನ್ನು ಸಂಪರ್ಕಿಸಬಹುದು. ಮೊಬೈಲ್ ಸಂಖ್ಯೆ 9798253742 ಗೆ ಕರೆ ಮಾಡಬಹುದು. ನಗರದ ಹೋಟೆಲ್ ಸಾಯಿ ಇಂಟರ್ ನ್ಯಾಷನಲ್ ವಾಸ್ತವ್ಯ ಮಾಡುವರು ಎಂದು ಯೋಜನಾ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ಉತ್ತಮ ಸೇವೆ ಮಾಡಲು ವೈದ್ಯರಿಗೆ ಕಟ್ಟುನಿಟ್ಟಿನ ಸೂಚನೆ: ಜಿಲ್ಲಾಧಿಕಾರಿ ಡಾ.ವೆಂಕಟೇಶ.ಎಂ.ವಿ

» **ದಾವಣಗೆರೆ**

ತಾಯಿ ಮತ್ತು ಶಿಶು ಮರಣ ತಡೆಗಟ್ಟುವ ನಿಟ್ಟಿನಲ್ಲಿ ವೈದ್ಯಾಧಿಕಾರಿಗಳು ಎಚ್ಚರ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ.ಎಂ.ವಿ ಸೂಚಿಸಿದರು. ಬುಧವಾರ(ಮಾ.13) ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ತಾಯಿ ಮತ್ತು ಶಿಶು ಮರಣದ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಪ್ರಸೂತಿ ತಜ್ಞರು, ವೈದ್ಯರು ಪ್ರಸವಕ್ಕೆ ಗರ್ಭಿಣಿಯರು ಆಸ್ಪತ್ರೆಗೆ ದಾಖಲಾದ ವೇಳೆ ತಕ್ಷಣ ತಪಾಸಣೆ ನಡೆಸಿ, ಅವರ ಆರೋಗ್ಯದ ಸ್ಥಿತಿ, ಗಂಭೀರತೆ ಬಗ್ಗೆ ಪರಿಶೀಲಿಸಿ ಏನಾದರೂ ಇದ್ದರೆ ಅದರ ಕುರಿತು ವಿವರವಾಗಿ ಕೇಸ್ ಶೀಟ್‌ನಲ್ಲಿ ದಾಖಲಿಸಬೇಕು ಹಾಗೂ ತಕ್ಷಣವೇ ಮುಂದಿನ ಚಿಕಿತ್ಸೆ ಕುರಿತು ಕ್ರಮವಹಿಸಬೇಕು ಎಂದರು.

ಗರ್ಭಿಣಿಯಾದಾಗ ಪೌಷ್ಟಿಕ ಆಹಾರ ಸೇವನೆಗೆ ಮಾಡುವಂತೆ ಅರಿವು ಮೂಡಿಸಬೇಕು. ಗರ್ಭಿಣಿ ಸ್ತ್ರೀಯರು ಮಾತೃಪೂರ್ಣ ಯೋಜನೆಯ ಸೌಲಭ್ಯ ಸಂಪೂರ್ಣವಾಗಿ ಬಳಸಿಕೊಳ್ಳುವಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸಹಾಯಕಿಯರು ಗಮನಿಸಬೇಕು. ಗರ್ಭಿಣಿ ಸ್ತ್ರೀಯರನ್ನು ಹೆರಿಗೆಗೆ ಆಸ್ಪತ್ರೆಗೆ ಕರೆದುಕೊಂಡು ಬರುವಲ್ಲಿ ಆಶಾ ಕಾರ್ಯಕರ್ತೆಯರು ಕಾಳಜಿ ವಹಿಸಬೇಕು ಎಂದರು. ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಪ್ರಸೂತಿ ವಿಭಾಗದ ವೈದ್ಯರು ಅವರ ಕೆಲಸದಲ್ಲಿ ಹಾಜರಿದ್ದು, ತಕ್ಷಣ ಗರ್ಭಿಣಿಯರನ್ನು ಪರೀಕ್ಷಿಸಿ ಸೂಕ್ತ ಚಿಕಿತ್ಸೆ ನೀಡುವ ಮೂಲಕ ತಾಯಿ ಮರಣ ಪ್ರಮಾಣವನ್ನು ಕಡಿಮೆ ಮಾಡಬೇಕೆಂದರು. ಹೆರಿಗೆ ಸಂದರ್ಭದಲ್ಲಿ ಅಗತ್ಯವಿರುವ ರಕ್ತ, ಮತ್ತಿತರ ಪೂರ್ವ ಸಿದ್ದತೆಗಳಿಗೆ ಹೆಚ್ಚಿನ ಗಮನ ಹರಿಸುವಂತೆ ವೈದ್ಯಾಧಿಕಾರಿಗಳಿಗೆ ತಿಳಿಸಿದ ಅವರು ಗರ್ಭಿಣಿಯರು ಹೆಚ್ಚಾಗಿ ಹೆರಿಗೆ ಸಂದರ್ಭದಲ್ಲಿ ಅತಿಯಾದ ಬಿ.ಪಿಯಿಂದ ಮರಣ ಹೊಂದಿರುವ ಕಾರಣ, ಅದರ ಕಡೆ ಹೆಚ್ಚು ಗಮನವಹಿಸಬೇಕು.

# ಕೋರ್ಟ್‌ನಲ್ಲಿ ಬಾಕಿ ಇರುವ ದೌರ್ಜನ್ಯ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಆದ್ಯತೆ ನೀಡಿ: ಡಿಸಿ ಟಿ.ವೆಂಕಟೇಶ್

» **ಚಿತ್ರದುರ್ಗ**

ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿರುವ ದೌರ್ಜನ್ಯ ಪ್ರಕರಣಗಳಲ್ಲಿ, ಸರಿಯಾದ ಹಾಗೂ ಸಮರ್ಪಕವಾದ ಸಾಕ್ಷಿ ಹಾಗೂ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸುವುದರೊಂದಿಗೆ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಪೊಲೀಸ್ ಹಾಗೂ ಸರ್ಕಾರಿ ಅಭಿಯೋಜನಕರು ಪ್ರಯತ್ನಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ, ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಮ್ಯಾನುಯಲ್ ಸ್ಕ್ಯಾವೆಂಜಿಂಗ್ ಕುರಿತು ಜರುಗಿದ ಸಭೆಗಳ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಶೀಘ್ರವಾಗಿ ನ್ಯಾಯ ದೊರೆತರೆ ಬಾಧಿತರಿಗೆ ಸೂಕ್ತ ರಕ್ಷಣೆ, ಹಣಕಾಸು ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಬಹುದು. ಬಹು ವರ್ಷಗಳ ಕಾಲ ನ್ಯಾಯಾಲಯದಲ್ಲಿ ಪ್ರಕರಣ ಉಳಿದರೆ, ಸಾಕ್ಷಿಗಳು ಸರಿಯಾಗಿ ಸ್ಪಂದಿಸುವುದಿಲ್ಲ. ಪ್ರಕರಣಗಳು ವಿಳಂಬವಾದಷ್ಟು ಆರೋಪಿಗಳು ಖುಲಾಸೆಯಾಗುವ ಸಂಭವ ಇರುತ್ತದೆ. ಇದಕ್ಕೆ ಅವಕಾಶ ನೀಡದೆ, ಶೀಘ್ರವಾಗಿ ನ್ಯಾಯ ದೊರಕಿಸಿಕೊಡುವ ಕೆಲಸವಾಗಬೇಕು. ಮುಂದಿನ ತ್ರೈಮಾಸಿಕ ಸಭೆಗೆ ನ್ಯಾಯಾಲಯದಲ್ಲಿ ಒಟ್ಟು ಎಷ್ಟು ಪ್ರಕರಣಗಳು, ಎಷ್ಟು ದಿನಗಳಿಂದ ಬಾಕಿ ಇವೆ, ವಿಚಾರಣೆಯ ಯಾವ ಹಂತದಲ್ಲಿವೆ ಎಂಬುದರ ಸಂಪೂರ್ಣ ವಿವರವನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೌರ್ಜನ್ಯ ಪ್ರತಿಬಂಧ ಕಾಯ್ದೆ ಕುರಿತು ಎಲ್ಲಾ ಜನಪ್ರತಿನಿಧಿಗಳನ್ನು ಒಳಗೊಂಡಂತೆ ಮೇಲ್ವರ್ಗದ ಕೇರಿಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು.



### ಗೈರು ಹಾಜರಾದ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ

ಸಭೆಗೆ ಗೈರು ಹಾಜರಾದ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜಿಂಗ್, ಸಫಾಯಿ ಕರ್ಮಚಾರಿಗಳ ಕುರಿತು ಚರ್ಚಿಸಲಾಯಿತು. ಜಿ.ಪಂ.ಉಪ ಕಾರ್ಯದರ್ಶಿ ತಿಮ್ಮಪ್ಪ, ಜಿ.ಪಂ. ಯೋಜನಾ ನಿರ್ದೇಶಕಿ ನಂದಿನಿ.ಆರ್.ಬಿ. ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ತೋಟಗಾರಿಕೆ ಉಪನಿರ್ದೇಶಕಿ, ಸವಿತಾ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪರಮೇಶ್ವರಪ್ಪ, ಕೈಗಾರಿಕೆ ಇಲಾಖೆ ಉಪನಿರ್ದೇಶಕ ಮಂಜುನಾಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್.ಕೆ.ಎಸ್, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಎಂ.ಡಿ. ನವಕೋಟಿ ಮತ್ತು ಬೋರಸ್ವಾಮಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಜನರು ಹೆಚ್ಚಿಗೆ ಸೇರುವ, ಸರ್ಕಾರದಿಂದ ಆಯೋಜಿಸಲ್ಪಡುವ ಜನಸ್ಪಂದನ, ಗ್ಯಾರಂಟಿ ಫಲಾನುಭವಿಗಳ ಸಮಾವೇಶ ಹಾಗೂ ವಿವಿಧ ಕಾರ್ಯಕ್ರಮಗಳ ಸಂದರ್ಭಗಳನ್ನು ಉಪಯೋಗಿಸಿಕೊಂಡು, ಕಾಯ್ದೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು. ದೌರ್ಜನ್ಯ ನಡೆಯದಂತೆ ತಡೆಯುವುದು ಹಾಗೂ ಅರಿವು ಮೂಡಿಸುವುದು ನಮ್ಮೆಲ್ಲರ ಮೊದಲ ಆದ್ಯತೆ ಆಗಬೇಕು. ಜಿಲ್ಲಾ ಕೇಂದ್ರದಿಂದ ಹೆಚ್ಚು ದೂರದಲ್ಲಿರುವ ಹಳ್ಳಿಗಳಲ್ಲಿಯೇ ಹೆಚ್ಚು ದೌರ್ಜನ್ಯ ಪ್ರಕರಣಗಳು ಕಂಡುಬರುತ್ತವೆ. ಇಂತಹ ಕಡೆ ಪೊಲೀಸರು ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯಿಂದ 31 ಪ್ರಕರಣಗಳಲ್ಲಿ 58 ಜನರಿಗೆ ಪರಿಹಾರ ಧನ ನೀಡಲಾಗಿದೆ. ನ್ಯಾಯಾಲಯದಲ್ಲಿ ಫೆಬ್ರವರಿ ಅಂತ್ಯಕ್ಕೆ 35 ಪ್ರಕರಣಗಳು ಬಾಕಿ ಇವೆ. ಈ ವರ್ಷದ ನವೆಂಬರ್ ಮಾಹೆಯಿಂದ ಫೆಬ್ರವರಿ ಮಾಹೆ ವರೆಗೆ ಒಟ್ಟು 10 ಪ್ರಕರಣಗಳಲ್ಲಿ ಆರೋಪಿಗಳು ಬಿಡುಗಡೆಯಾಗಿದ್ದಾರೆ. ಒಂದು ಪ್ರಕರಣ ಡಿಸ್‌ಚಾರ್ಜ್ ಆಗಿದೆ. ಯಾವುದೇ ದೌರ್ಜನ್ಯ ಪ್ರಕರಣದಲ್ಲಿ ಶಿಕ್ಷೆಯಾಗಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾಹಿತಿ ನೀಡಿದರು.ಪ್ರಸಕ್ತ ತ್ರೈಮಾಸಿಕ ಅವಧಿಯಲ್ಲಿ ಒಟ್ಟು 15 ಪ್ರಕರಣಗಳು ಜಿಲ್ಲೆಯಲ್ಲಿ ದಾಖಲಾಗಿವೆ. 12 ತನಿಖಾ ಹಂತದಲ್ಲಿ ಇದ್ದು, 3 ಪ್ರಕರಣಗಳಲ್ಲಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದು ಚಿತ್ರದುರ್ಗ ಡಿವೈಎಸ್‌ಪಿ ದಿನಕರ್ ಮಾಹಿತಿ ನೀಡಿದರು.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು. ತಹಶೀಲ್ದಾರ, ಬಿಇಓಗಳು ಮಕ್ಕಳ ಮನೆಗಳಿಗೆ ತೆರಳಿ ಪೋಷಕರಿಗೆ ತಿಳಿ ಹೇಳಬೇಕು. ಶಾಲೆಗೆ ಬರುವ ಮಕ್ಕಳಿಗೆ ಹಾಸ್ಟೆಲ್ ಸೌಲಭ್ಯ ಒದಗಿಸಬೇಕು. ವಾಲ್ಮೀಕಿ, ಆದಿ ಜಾಂಬವ, ಬೋವಿ, ಅಂಬೇಡ್ಕರ್ ಅಭಿವೃದ್ಧಿ ನಿಗಮಗಳಲ್ಲಿ ದೊರೆಯುವ ಸೌಲಭ್ಯಗಳ ಕುರಿತು ಹೆಚ್ಚಿನ ಜಾಗೃತಿಯನ್ನು ಮೂಡಿಸುವುದರೊಂದಿಗೆ, ಫಲಾನುಭವಿಗಳಿಗೆ ನೆರವು ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಶಾಲೆಯಿಂದ ಹೊರಗುಳಿದ ಮೊಳಕಾಲ್ಮೂರು ತಾಲ್ಲೂಕಿನ 34 ಹಾಗೂ ಚಳ್ಳಕೆರೆ ತಾಲ್ಲೂಕಿನ 64 ಮಕ್ಕಳನ್ನು ಮುಖ್ಯ ವಾಹಿನಿಗೆ ತರಲಾಗಿದೆ. 08 ಮಕ್ಕಳ ಕುಟುಂಬ ಆಂದ್ರ ಪ್ರದೇಶಕ್ಕೆ ಸಂಪೂರ್ಣವಾಗಿ ವಲಸೆ ಹೋಗಿದ್ದಾರೆ. 02 ವಿದ್ಯಾರ್ಥಿಗಳ ಪೋಷಕರು ತಮ್ಮ ಜಗಳದ ನಡುವೆ ಮಕ್ಕಳನ್ನು ಶಾಲೆ ಕಳುಹಿಸುತ್ತಿಲ್ಲ ಎಂದು ಶಿಕ್ಷಣ ಇಲಾಖೆ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ ವಿವಿಧ ವಿದ್ಯಾರ್ಥಿನಿಲಯಗಳಲ್ಲಿ ಬಾಲ್ಯ ವಿವಾಹ ಹಾಗೂ ಪೋಕ್ಸೋ ಕಾಯ್ದೆ ಕುರಿತು ಅರಿವು ಮೂಡಿಸುವ 16 ಕಾರ್ಯಕ್ರಮಗಳನ್ನು ಮಾಡಲಾಗಿದೆ. ಇದರೊಂದಿಗೆ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಜಿಂಗಲ್‌ಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಕೆ ಉಪನಿರ್ದೇಶಕಿ ಭಾರತಿ ಬಣಕಾರ್ ಸಭೆಯಲ್ಲಿ ತಿಳಿಸಿದರು.

**ಮಾರ್ಚ್ ಅಂತ್ಯಕ್ಕೆ ಶೇ.100 ರಷ್ಟು ಪ್ರಗತಿ ಸಾಧಿಸಿ:** ಎಲ್ಲಾ ಇಲಾಖೆಗಳು ಮಾರ್ಚ್ ಅಂತ್ಯಕ್ಕೆ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಯೋಜನೆಯ ಅಡಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಬಿಡುಗಡೆಯಾದ ಎಲ್ಲಾ ಹಣವನ್ನು ಖರ್ಚು ಮಾಡಬೇಕು. ಚುನಾವಣಾ ನೀತಿ ಸಂಹಿತೆ ಜಾರಿಯಾಗುವ ಮುನ್ನವೇ ಕಾಮಗಾರಿಗಳನ್ನು ಆರಂಭಿಸಬೇಕು. ವಿವಿಧ ಯೋಜನೆಗಳ ಫಲಾನುಭವಿಗಳ ಪಟ್ಟಿಗೆ ಶಾಸಕರು ಹಾಗೂ ಸರ್ಕಾರದಿಂದ ಅನುಮೋದನೆ ಪಡೆದುಕೊಳ್ಳಬೇಕು. ಆರ್ಥಿಕ ಪ್ರಗತಿ ಸಾಧಿಸದಿದ್ದರೆ ನಿಯಮಾನುಸಾರ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ಗ್ರಾಮ ದೇವತೆ ಚಳ್ಳಕೆರೆಯಮ್ಮನ ಜಾತ್ರೆ: ಹರಿದು ಬಂದ ಭಕ್ತಸಾಗರ

# ಇಂದು ವೈಭವದ ಸಿಡಿ ಉತ್ಸವಕ್ಕೆ ಕ್ಷಣಗಣನೆ

» **ಚಳ್ಳಕೆರೆ**

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಮೂರನೇ ದಿನದ ಜಾತ್ರೋತ್ಸವ ಕಾರ್ಯಕ್ರಮ ಸಾವಿರಾರು ಭಕ್ತರ ದರ್ಶನದೊಂದಿಗೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಪ್ರತಿ ವರ್ಷಕ್ಕೊಮ್ಮೆ ನಡೆಯುವ ಈ ವಿಶೇಷ ಜಾತ್ರೆಗೆ ಕರ್ನಾಟಕವೂ ಸೇರಿದಂತೆ ಇತರೆ ರಾಜ್ಯಗಳಿಂದಲೂ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸುತ್ತಾರೆ. ವಿಶೇಷವಾಗಿ ಇಲ್ಲಿಂದ ಮದುವೆಯಾಗಿ ಬೇರೆ ಊರಿಗೆ ಹೋದವರು ತಮ್ಮ ತವರಿನ ಆರಾಧ್ಯದೈವ ಚಳ್ಳಕೆರೆಯಮ್ಮನ ದರ್ಶನ ಪಡೆದು ಉಡಿ ತುಂಬಿ ಮಾಂಗಲ್ಯಧಾರಣೆ ಮಾಡಿಸಿ, ಹಿಟ್ಟಿನಾರತಿ, ಬೇವಿನ ಸೀರೆ ಉತ್ಸವದಲ್ಲೂ ಸಹ ಪಾಲ್ಗೊಳ್ಳುತ್ತಾರೆ.

ಗುರುವಾರ ಈ ಜಾತ್ರೆಯ ವಿಶೇಷತೆ ಸಿಡಿ ಉತ್ಸವ ನಡೆಯಲಿದೆ. ಸಿಡಿ ಉತ್ಸವಕ್ಕೂ ಮುನ್ನ ದೇವಿಗೆ ಸಂಪ್ರದಾಯದಂತೆ ಪೂಜಾದಿಗಳನ್ನು ಪೂರೈಸಿ ದೇವಸ್ಥಾನದ ಆವರಣದಲ್ಲೇ ದರ್ಮದರ್ಶಿಗಳು ಹಾಗೂ ಆಡಳಿತ ಮಂಡಳಿತ ಎಲ್ಲಾ ನಿರ್ದೇಶಕರು ಶಾನುಬೋಗರು, ಗೌಡರು ಹಾಗೂ ಪಾರಂಪರಿಕ ಭಕ್ತರ ಸಮ್ಮುಖದಲ್ಲಿ ಮುಕ್ತಿಬಾವುಟ ಹರಾಜು ಮಾಡಲಾಗುವುದು.



ಮುಕ್ತಿ ಬಾವುಟ ಹರಾಜು ಮುಗಿದ ನಂತರ ದೇವಸ್ಥಾನದ ಆವರಣದಲ್ಲಿ ಪೋತರಾಜರ ವೀರನಾಟ್ಯ, ಕೀಲುಕುದುರೆ, ಮರಗಾಲು ಅನೇಕ ಕಲಾತಂಡಗಳೊಂದಿಗೆ ದೇವಿಯ ಉತ್ಸವದ ಮೆರವಣಿಗೆ ಆರಂಭವಾಗುತ್ತದೆ. ಶ್ರೀಚಳ್ಳಕೆರೆಯಮ್ಮ ದೇವಸ್ಥಾನದಿಂದ ನೆಹರೂ ವೃತ್ತ, ಬೆಂಗಳೂರು ರಸ್ತೆಯಮೂಲಕ ಸಿಡಿ ಉತ್ಸವ ಬಸವೇಶ್ವರ ವೃತ್ತದ ತನಕ ತೆರಳಿ ಮರಳಿ ದೇವಸ್ಥಾನಕ್ಕೆ ಆಗಮಿಸಲಿದೆ.

ಈ ಸಂದರ್ಭದಲ್ಲಿ ಬೆಂಗಳೂರು, ಬಳ್ಳಾರಿ ರಸ್ತೆಯ 2 ಕಡೆ ಸಾವಿರಾರು ಭಕ್ತರು ರಸ್ತೆಯಲ್ಲದೆ ಅಕ್ಕಪಕ್ಕದ ಮಹಡಿಯನ್ನೇರಿ ಸಿಡಿ ಉತ್ಸವವನ್ನು ಕಣ್ತುಂಬಿಕೊಳ್ಳುವರು. ಈ ಸಂದರ್ಭದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಇಲಾಖೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ನಿಯೋಜಿಸಿ ವಾಹನ ಸಂಚಾರವನ್ನು ಎರಡೂ ರಸ್ತೆಗಳಲ್ಲಿ ನಿಯಂತ್ರಿಸಿ ಸಿಡಿ ಉತ್ಸವ ಸುಗಮವಾಗಿ ನಡೆಯಲು ಎಲ್ಲಾ ವ್ಯವಸ್ಥೆ ಮಾಡಿಕೊಡಲಾಗುವುದು.

### ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವಾಸವಿ ವನಿತಾ ಸಂಘದಿಂದ ಉಚಿತ ಮೇವು ವಿತರಣೆ.




» **ಚಳ್ಳಕೆರೆ**

ಕರ್ನಾಟಕವೂ ಸೇರಿದಂತೆ ಎಲ್ಲೆಡೆ ಅಂತರಾಷ್ಟ್ರೀಯ ಮಹಿಳಾದಿನಾಚರಣೆಯನ್ನು ವಿವಿಧ ಮಹಿಳಾ ಸಂಘಟನೆಗಳು ಸಂಭ್ರಮದಿಂದ ಆಚರಿಸುತ್ತವೆ. ಆದರೆ ನಗರದ ವಾಸವಿ ವನಿತಾ ಮಹಿಳಾ ಸಂಘ ಈ ಬಾರಿಯ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಅರ್ಥಗರ್ಭಿತವಾಗಿ ಆಚರಿಸುವ ಮೂಲಕ ಸಾರ್ಥಕತೆ ಮೆರೆದಿದೆ ಎಂದು ಅಧ್ಯಕ್ಷೆ ಕಲ್ಪನಮಧುಸೂಧನ್ ತಿಳಿಸಿದರು. ಅವರು, ಬುಧವಾರ ನಗರದ ಹೊರವಲಯದ ಅಜ್ಜಯ್ಯನಗುಡಿ ಬಳಿ ಇರುವ ದೇವರ ಎತ್ತುಗಳಿಗೆ ವಾಸವಿ ವನಿತಾ ಮಹಿಳಾ ಸಂಘದವತಿಯಿಂದ ಜಾನುವಾರುಗಳಿಗೆ ಉಚಿತವಾಗಿ ಮೇವು, ಬಾಳೆಹಣ್ಣು ವಿತರಿಸಿದ್ದಲ್ಲದೆ, ಅಲ್ಲಿನ ರಕ್ಷಕರು ಹಾಗೂ ಕಿಲಾರಿಗಳಿಗೆ ಅಕ್ಕಿ, ಬೇಳೆ, ಬೆಲ್ಲ ಹಾಗೂ ಬಟ್ಟೆ ವಿತರಿಸಿ ಮಾತನಾಡಿದರು. ಗೋವು ಎಲ್ಲರಿಗೂ ತಿಳಿದಂತೆ ಭಕ್ತಿಶ್ರದ್ದೆಯಿಂದ ಪೂಜಿಸುವ ದೈವತ್ವದ ಶಕ್ತಿಯಾಗಿದೆ.

**ಪ್ರಮುಖ ಸುದ್ದಿ**

# ರಾಜ್ಯ ಸರ್ಕಾರ ರೈತರ ಸರ್ವತೋಮುಖ ಅಭಿವೃದ್ಧಿಗಾಗಿ ಹೊಸಯೋಜನೆಗಳ ಮೂಲಕ ಸಹಕಾರ: ರಘುಮೂರ್ತಿ

» **ಚಳ್ಳಕೆರೆ**

ರಾಜ್ಯ ಸರ್ಕಾರ ರೈತ ಸಮುದಾಯದ ಅಭಿವೃದ್ಧಿಗಾಗಿ ಕೃಷಿ ಇಲಾಖೆ ಮತ್ತು ಜಲಾನಯಕ ಅಭಿವೃದ್ಧಿ ಇಲಾಖೆ ಮೂಲಕ ಅನೇಕ ನೂತನ ಯೋಜನೆಗಳನ್ನು ಜಾರಿಗೆ ತರುವ ಮೂಲಕ ರೈತರಿಗೆ ಹೆಚ್ಚು ನೆರವು ನೀಡುವಲ್ಲಿ ಮುಂದಾಗಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಇದರ ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕೆಂದು ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆಗಳ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ತಾಲ್ಲೂಕಿನ ಕರೀಕೆರೆ ಗ್ರಾಮದಲ್ಲಿ ಕೃಷಿ, ಜಲಾನಯನ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ರಿವಾರ್ಡ್ ಯೋಜನೆಯನ್ನು ಉದ್ಘಾಟಿಸಿ ಮಾತನಾಡಿದರು. ರೈತರು ತಮ್ಮ ಜಮೀನುಗಳಲ್ಲಿ ನಿರಂತರವಾಗಿ ಒಂದೇ ಬೆಳೆ ಬೆಳೆಯುತ್ತಾ ಹೋದರೆ ನಿರೀಕ್ಷಿತ






ಮಟ್ಟದಲ್ಲಿ ಆರ್ಥಿಕ ಲಾಭವಾಗುವುದಿಲ್ಲ. ಆದ್ದರಿಂದ ಇಲಾಖೆಯ ಹೊಸ ಯೋಜನೆಗಳ ಅನುಷ್ಟಾನಕ್ಕೆ ರೈತರು ಮುಂದಾಗಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ನಿರ್ದೇಶಕ ಡಾ.ಬಿ.ಎನ್.ಪ್ರಭಾರಕ್ ಮಾತನಾಡಿ, ರೈತರು ಜಮೀನಿನಲ್ಲಿ ನೀರು ಸಂರಕ್ಷಣೆ ಮೂಲಕ ಬೆಳೆಗಳನ್ನು ಬೆಳೆಯುವತ್ತ ಗಮನ ನೀಡಬೇಕು. ತಮ್ಮ ಜಮೀನಿನ ಮಣ್ಣಿನ ಫಲವತ್ತತೆಯನ್ನು ಪ್ರಯೋಗಾಲಯದ ಮೂಲಕ ಪರೀಕ್ಷಿಸಿ ಮಣ್ಣಿನ ಫಲವತ್ತತೆಯ ಬಗ್ಗೆ ಮಾಹಿತಿ ಪಡೆಯಿರಿ.

ವಿಶೇಷವಾಗಿ ರಿವಾರ್ಡ್ ಯೋಜನೆ ಮೂಲಕ ರೈತರು ಬದು ನಿರ್ಮಾಣ, ಸಸಿಗಳ ಸಂರಕ್ಷಣೆ ಬೆಳವಣಿಗೆ, ಕೃಷಿ ಹೊಂಡ ನಿರ್ಮಾಣ ಮುಂತಾದ ಕಾರ್ಯಕ್ರಮಗಳನ್ನು ಈ ಯೋಜನೆಯಡಿ ಪಡೆದುಕೊಂಡು ಆರ್ಥಿಕ ಸಭಲತೆ ಹೊಂದಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತಾನಾಗರಾಜು ವಹಿಸಿದ್ದರು. ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ಜಂಟಿ ಕೃಷಿ ನಿರ್ದೇಶಕ ಮಂಜುನಾಥ, ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್, ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯ ರಾಜಣ್ಣ, ಮಂಜುನಾಥ, ರಾಮಣ್ಣ, ಪ್ರಕಾಶ್, ರಮೇಶ್, ಓಬಳೇಶ್, ನಗರಸಭಾ ಸದಸ್ಯ ಬಿ.ಟಿ.ರಮೇಶ್‌ಗೌಡ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಯಶಸ್ವಿನಿ ನೊಂದಣಿ: ಮಾ.31 ರವರೆಗೆ ವಿಸ್ತರಣೆ

» **ಚಿತ್ರದುರ್ಗ**

2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸುವ ಅವಧಿಯನ್ನು ಮಾರ್ಚ್ 31ರ ವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯಲ್ಲಿ 2023–24ನೇ ಸಾಲಿಗೆ ಯಶಸ್ವಿನಿ ಸಹಕಾರ ಸದಸ್ಯರ ಆರೋಗ್ಯ ರಕ್ಷಣಾ ಯೋಜನೆಯು ಅನುಷ್ಠಾನಗೊಂಡಿದ್ದು, ಈ ಯೋಜನೆಯಡಿ ಸದಸ್ಯರನ್ನು ನೊಂದಾಯಿಸು ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದೆ. ಈ ಪ್ರಯುಕ್ತ ಗ್ರಾಮೀಣ ಹಾಗೂ ನಗರ ಪ್ರದೇಶದ ಸಹಕಾರ ಸಂಘಗಳ ಸದಸ್ಯರು ಇನ್ನೂ ಹೆಚ್ಚಿನ ಸದಸ್ಯರನ್ನು ನೊಂದಾಯಿಸಿಕೊಳ್ಳಲು ಮಾರ್ಚ್ 31 ರವರೆಗೆ ನೋಂದಣಿ ಅವಧಿಯನ್ನು ವಿಸ್ತರಿಸ ಲಾಗಿದೆ. ಈ ಸದಾವಕಾಶವನ್ನು ಎಲ್ಲಾ ಗ್ರಾಮಾಂತರ ರೈತ ಸಹಕಾರಿ ಸದಸ್ಯರು ಹಾಗೂ ನಗರ ಸಹಕಾರಿ ಸದಸ್ಯರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ.

### ಮಾ. 16 ರಂದು ಶ್ವಾನ ಪ್ರದರ್ಶನ

» **ಚಿತ್ರದುರ್ಗ**

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ 2023–24 ನೇ ಸಾಲಿನ ವಿಸ್ತರಣಾ ಘಟಕಗಳ ಬಲಪಡಿಸುವಿಕೆ ಕಾರ್ಯಕ್ರಮದಡಿ ಜಿಲ್ಲಾ ಮಟ್ಟದ ಶ್ವಾನ ಪ್ರದರ್ಶನ ಸ್ಪರ್ಧೆ ಹಾಗೂ ಬಹುಮಾನ ವಿತರಣಾ ಕಾರ್ಯಕ್ರಮವನ್ನು ಮಾ. 16 ರಂದು ಸಂಜೆ 5 ಗಂಟೆಗೆ ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಡಾ. ಇಂದಿರಾಬಾಯಿ ಜಿ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

### “ಮತ್ಸ್ಯವಾಹಿನಿ” ಇ-ತ್ರಿಚಕ್ರ ವಾಹನ ಪರವಾನಿಗೆಗಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಮೀನುಗಾರಿಕೆ ಇಲಾಖಾ ವತಿಯಿಂದ 2023–24ನೇ ಸಾಲಿಗೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ, ಸ್ಥಳೀಯವಾಗಿ ಮೀನು ಸೇವೆಯನ್ನು ಪ್ರೋತ್ಸಾಹಿಸಲು, ಪರಿಸರ ಸ್ನೇಹಿ ಸುಸಜ್ಜಿತ ಕಿಯೋಸ್ಕ್ ಮಾದರಿಯ ಇ–ತ್ರಿಚಕ್ರ ವಾಹನಗಳಲ್ಲಿ ತಾಜಾ ಮೀನು ಉತ್ಪನ್ನ ಮಾರಾಟಕ್ಕಾಗಿ ಸಾರ್ವಜನಿಕ ಸಹಭಾಗಿತ್ವದ ಮೂಲಕ ಇ–ವಾಹನಗಳನ್ನು ಪರವಾನಗಿ ಆಧಾರದಲ್ಲಿ ಪಡೆಯಲು ಮೀನುಗಾರಿಕೆಯಲ್ಲಿ ತೊಡಗಿರುವಆಸಕ್ತರಿಂದಅರ್ಜಿಆಹ್ವಾನಿಸಲಾಗಿದೆ. ಮಾರ್ಚ್ 25 ಅರ್ಜಿ ಸಲ್ಲಿಸಲು ಕೊನೆಯ ದಿನ. ಜಿಲ್ಲೆಗೆ 3 ಭೌತಿಕ ಗುರಿ ನಿಗದಿಪಡಿಸಲಾಗಿದ್ದು, ಸಾಮಾನ್ಯ ವರ್ಗದವರಿಗೆ ಭದ್ರತಾ ಠೇವಣಿ ರೂ.1 ಲಕ್ಷ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಮಹಿಳೆಯರಿಗೆ ಭದ್ರತಾ ಠೇವಣಿ ರೂ.0.50 ಲಕ್ಷ ನಿಗದಿಪಡಿಸಲಾಗಿದೆ. ಪರವಾನಿಗೆದಾರರು ಮಾಹೆಯಾನ ರೂ. 3000/– ಮಾಸಿಕ ಶುಲ್ಕ ಭರಿಸಬೇಕಾಗುತ್ತದೆ. ಆಸಕ್ತರು ಮಾ.25 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕ ಕಚೇರಿ, ಚಿತ್ರದುರ್ಗ, ಹೊಸದುರ್ಗ, ಹಿರಿಯೂರು, ಚಳ್ಳಕೆರೆ ಮತ್ತು ಮೊಳಕಾಲ್ಮೂರು ಮೀನಿಗಾರಿಕೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಘ ಸಂಸ್ಥೆಗಳ ಲೆಕ್ಕಪತ್ರ ದಾಖಲೆ ಸಲ್ಲಿಸಲು ಸೂಚನೆ

» **ಚಿತ್ರದುರ್ಗ**

ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾದ ಪ್ರತಿಯೊಂದು ಸಂಘ– ಸಂಸ್ಥೆಯು ಕಲಂ 13ರಂತೆ ಸಂಬಂಧಿಸಿದ ದಾಖಲಾತಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿ ಸ್ವೀಕೃತಿ ಪತ್ರ ಪಡೆಯಬೇಕಾಗಿರುತ್ತದೆ. ಆದರೆ, ಅನೇಕ ಸಂಘ– ಸಂಸ್ಥೆಗಳು ಐದು ವರ್ಷಗಳಿಗೂ ಮೇಲ್ಪಟ್ಟು ದಾಖಲಾತಿಗಳನ್ನು ಸಲ್ಲಿಸಿ ಸ್ವೀಕೃತಿ ಪತ್ರ ಪಡೆಯಲು ಬಾಕಿ ಇದ್ದು, ಈ ಸಂಘ–ಸಂಸ್ಥೆಗಳ ಸದಸ್ಯರ ಹಿತದೃಷ್ಟಿಯಿಂದ ಮತ್ತೊಂದು ಬಾರಿ ಅವಕಾಶ ನೀಡಿ, ಪ್ರತಿ ವರ್ಷಕ್ಕೆ ಹೆಚ್ಚುವರಿ ರೂ.3000/–ಗಳ ದಂಡ ವಿಧಿಸಿ 2024ರ ಜೂನ್ 30 ರವರಗೆ ಸೀಕೃತಿ ಪಡೆಯಲು ಅವಕಾಶ ನೀಡಲಾಗಿದೆ ಎಂದು ಸಂಘಗಳ ಜಿಲ್ಲಾ ನೊಂದಣಾಧಿಕಾರಿಗಳುತಿಳಿಸಿದ್ದಾರೆ.

### ಡಾಕ್ ಅದಾಲತ್

» **ದಾವಣಗೆರೆ**

ಸಾರ್ವಜನಿಕರ ಮತ್ತು ಅಂಚೆ ಗ್ರಾಹಕರ ಅಂಚೆ ಸೇವೆಗಳಿಗೆ ಸಂಬಂಧಿಸಿದ ದೂರು ಮತ್ತು ಸಲಹೆಗಳನ್ನು ಪಡೆಯಲು ಮಾ.20 ರಂದು ಸಂಜೆ 4 ಗಂಟೆಗೆ ದಾವಣಗೆರೆ ಅಂಚೆ ಅಧೀಕ್ಷಕರ ಕಚೇರಿ, ಪ್ರಧಾನ ಅಂಚೆ ಕಚೇರಿಯ ಮೊದಲನೇ ಮಹಡಿ, ಗಡಿಯಾರ ಕಂಬದ ಹತ್ತಿರ ಮಂಡಿಪೇಟೆ ಇಲ್ಲಿ ಡಾಕ್ ಅದಾಲತ್ ನೆಡೆಸಲಾಗುವುದು.

# ಪಿಎಂ ಸೂರಜ್ ಪೋರ್ಟಲ್ ಲೋಕಾರ್ಪಣೆ

## ಬ್ಯಾಂಕ್‌ಗಳು ಕೆಳವರ್ಗದ ಜನರಿಗೆ ಅವಕಾಶ ಕಲ್ಪಿಸಿ –ಸರ್ಕಾರದ ಸೌಲಭ್ಯಗಳನ್ನು ತಲುಪಿಸಬೇಕು: ಕೇಂದ್ರ ಸಚಿವ ಎ.ನಾರಾಯಣ ಸ್ವಾಮಿ

» **ಚಿತ್ರದುರ್ಗ**

ಕೆಳವರ್ಗದ ಅವಕಾಶ ವಂಚಿತರು ಹಾಗೂ ಶೋಷಿತರಿಗೆ, ದೇಶದ ಬ್ಯಾಂಕುಗಳು ಅವಕಾಶ ಕಲ್ಪಿಸಿ, ಸರ್ಕಾರದ ಸೌಲಭ್ಯಗಳನ್ನು ತಲುಪಿಸಬೇಕು ಎಂದು ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಖಾತೆ ರಾಜ್ಯ ಸಚಿವ ಹಾಗೂ ಸಂಸದರಾದ ಎ.ನಾರಾಯಣಸ್ವಾಮಿ ಅವರು ಹೇಳಿದರು.

ನಗರದ ಐಯುಡಿಪಿ ಲೇ ಔಟ್‌ನಲ್ಲಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ಕಚೇರಿಯಲ್ಲಿ ಬುಧವಾರ ಏರ್ಪಡಿಸಲಾದ ಪಿ.ಎಂ. ಸೂರಜ್ ಪೋರ್ಟಲ್ ಉದ್ಘಾಟನೆ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.





ದೇಶದ ಶೇ.99 ರಷ್ಟು ಬ್ಯಾಂಕುಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸೇರಿದಂತೆ, ಇತರೆ ಅವಕಾಶ ವಂಚಿತರು ಹಾಗೂ ಶೋಷಿತರಿಗೆ ಕೇಂದ್ರ ಸರ್ಕಾರ ರೂಪಿಸಿರುವ ಯೋಜನೆಗಳ ಬಗ್ಗೆ ಮಾಹಿತಿಯನ್ನು ಸಮರ್ಪಕವಾಗಿ ನೀಡುವುದಿಲ್ಲ. ಕೆಳವರ್ಗದ ಜನರಿಗೆ ಬ್ಯಾಂಕ್‌ಗಳು ಸೌಲಭ್ಯಗಳನ್ನು ನೀಡುತ್ತಿಲ್ಲ. ಇದು ದೇಶವೇ ನಾಚಿಕೆ ಪಡುವ ಸಂಗತಿಯಾಗಿದೆ ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಬೇಸರ ವ್ಯಕ್ತಪಡಿಸಿದರು. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯಿಂದ ರಾಜ್ಯ ಸರ್ಕಾರ ಹಾಗೂ ವಿವಿಧ ನಿಗಮ ಮಂಡಳಿಗೆ ನೀಡುತ್ತಿರುವ ಹಣಕಾಸಿನ ಬಡ್ಡಿದರವನ್ನು ಕಡಿಮೆ ಮಾಡಲು ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರ ಬಳಿ ಚರ್ಚಿಸಿದ್ದರ ಫಲವಾಗಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಫಲಾನುಭವಿಗಳು ಸ್ವ–ಉದ್ಯೋಗ ಕೈಗೊಳ್ಳಲು ಶೇ.4 ರಷ್ಟು ಹಾಗೂ ಉದ್ದಿಮೆ ಸ್ಥಾಪಿಸಲು ಶೇ.3 ರಷ್ಟು ಬಡ್ಡಿದರದಲ್ಲಿ ಬ್ಯಾಂಕ್ ಸಾಲ ಸೌಲಭ್ಯ ಲಭಿಸುವಂತಾಗಿದೆ ಎಂದರು.ಬ್ಯಾಂಕ್ ಸೌಲಭ್ಯಗಳು ಫಲಾನುಭವಿಗಳಿಗೆ ನೇರವಾಗಿ ದೊರಕುವಂತೆ ಮಾಡಬೇಕು ಎಂಬ ಉದ್ದೇಶದಿಂದ ಪಿ.ಎಂ.ಸೂರಜ್ ಪೋರ್ಟಲ್ ಆರಂಭಿಸಲಾಗುತ್ತಿದೆ. ಪೋರ್ಟಲ್ ಮೂಲಕ ಬ್ಯಾಂಕುಗಳಿಗೆ ಉದ್ದಿಮೆ ಸ್ಥಾಪಿಸಲು ಹಾಗೂ ಇತರೆ ಆರ್ಥಿಕ ಚಟುವಟಿಕೆಗೆ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇರುವುದಿಲ್ಲ. ಬ್ಯಾಂಕುಗಳು ವಿನಾಕರಣ ಅರ್ಜಿಯನ್ನು ತಿರಸ್ಕರಿಸಲು ಆಗುವುದಿಲ್ಲ. ಅರ್ಜಿದಾರರು ಅರ್ಜಿ ಸ್ಥಿತಿಗತಿ ಮಾಹಿತಿಯನ್ನು ಕೂತಲ್ಲಿಯೇ ಪಡೆಯಬಹುದಾಗಿದೆ. ರಿಯಾಯಿತಿ, ಕಡಿಮೆ ಬಡ್ಡಿದರ ಸೌಲಭ್ಯಗಳು ಸಹ ನೇರವಾಗಿ ಫಲಾನುಭವಿಗಳಿಗೆ ದೊರಕಲಿವೆ ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ವರ್ಚುಯಲ್ ಮೂಲಕ ಪಿ.ಎಂ.ಸೂರಜ್ ಪೋರ್ಟಲ್ ಉದ್ಘಾಟಿಸಿದರು. ನಂತರ ಕೇಂದ್ರ ಸರ್ಕಾರದ ವಿವಿಧ ಯೋಜನೆಯಡಿ ಬ್ಯಾಂಕ್ ಸೌಲಭ್ಯ ಪಡೆದ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು. ಎನ್.ಎಸ್.ಸಿ.ಎಫ್.ಡಿ.ಸಿ ಸಿಜಿಎಂ ರಮೇಶ್ ರಾವ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಜನರಲ್ ಮ್ಯಾನೇಜರ್ ಎಸ್.ಕೆ. ಭಾಗ್ಯರೇಖಾ, ಪ್ರಾದೇಶಿಕ ವ್ಯವಸ್ಥಾಪಕ ಎಂ.ಹರಿಪ್ರಸಾದ್, ಹಿರಿಯ ವ್ಯವಸ್ಥಾಪಕಿ ಎಂ. ನವ್ಯ ಹೆಗಡೆ, ಹಿರಿಯ ವ್ಯವಸ್ಥಾಪಕ ಮೊಸ್ಸೆ ಬಾಬು, ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್, ಸಮಾಜಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಉಪಸ್ಥಿತರಿದ್ದರು.

### ಪರಿಶಿಷ್ಟ ಜಾತಿ, ಪ.ಪಂಗಡದವರ ಕುಂದುಕೊರತೆ ಸಭೆ

# ಬಹು ದಿನಗಳ ಬೇಡಿಕೆ ಅಂಬೇಡ್ಕರ್ ಭವನಕ್ಕೆ ಸ್ಥಳ ಮೀಸಲು, ನಕಾಶೆ ರಸ್ತೆ ತೆರವಿಗೆ ಅಸ್ತು

» **ದಾವಣಗೆರೆ**

ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಡಾ; ಬಿ.ಆರ್. ಅಂಬೇಡ್ಕರ್ ರವರ ಭವನ ನಿರ್ಮಾಣವಾಗಿದ್ದರೂ ದಾವಣಗೆರೆಯಲ್ಲಿ ಬಹು ವರ್ಷಗಳಿಂದಲೂ ನಿವೇಶನದ ಸಮಸ್ಯೆಯಿಂದ ಭವನ ನಿರ್ಮಾಣ ಮಾಡಲು ಸಾಧ್ಯವಾಗಿರುವುದಿಲ್ಲ. ದಲಿತ ಮುಖಂಡರ ಒಕ್ಕೋರಲಿನ ಬೇಡಿಕೆ ಇದಾಗಿದ್ದು ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿನ ಸರ್ಕ್ಯೂಟ್‌ಹೌಸ್ ಪಕ್ಕದಲ್ಲಿ ಒಂದು ಎಕರೆ ಜಾಗವನ್ನು ಡಾ; ಬಿ.ಅರ್.ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಮೀಸಲಿಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು.

ಅವರು ಬುಧವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕುಂದುಕೊರತೆಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಆಗಮಿಸಿದ ದಲಿತ ಮುಖಂಡರು, ಸಾರ್ವಜನಿಕರಿಂದ ಅಹವಾಲುಗಳನ್ನು ಆಲಿಸಿ ನಂತರ ಮಾತನಾಡಿದರು.

ದಲಿತ ಮುಖಂಡರು ಒಕ್ಕೋರಲಿನಿಂದ ಜಿಲ್ಲಾ ಕೇಂದ್ರದಲ್ಲಿ ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ನಗರದ ಮಧ್ಯ ಭಾಗದಲ್ಲಿ ಜಾಗವನ್ನು ನೀಡಬೇಕೆಂದು ಒತ್ತಾಯ ಮಾಡುವ ಜೊತೆಗೆ ಭವನ ನಿರ್ಮಾಣ ಮಾಡಿದ್ದಲ್ಲಿ ಹೋರಾಟ ಮಾಡಲು ಹಿಂದೆ ಬೀಳುವುದಿಲ್ಲ ಎಂದು ಮುಖಂಡರು ತಮ್ಮ ಭಾವನೆಗಳನ್ನು ಹಂಚಿಕೊಂಡರು. ಈ ವೇಳೆ ಜಿಲ್ಲಾಧಿಕಾರಿಯವರು ನಗರದ ಒಳಗೆ ಒಂದು ಎಕರೆ ಸರ್ಕಾರಿ ಜಾಗ ಸಿಗದ ಕಾರಣ ಮತ್ತು ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ನಿರ್ಮಾಣ ಮಾಡಿದರೆ ವಾಹನಗಳ ಸಂಚಾರಕ್ಕೆ ಮತ್ತು ನಗರ ಬೆಳೆಯುತ್ತಿರುವುದರಿಂದ ಸರ್ಕ್ಯೂಟ್ ಹೌಸ್ ಪಕ್ಕದ ಜಾಗ ಸೂಕ್ತವಾಗಿದ್ದು ಅಲ್ಲಿ ಒಂದು ಎಕರೆ ಜಾಗವನ್ನು ಮೀಸಲಿಡಲಾಗುತ್ತದೆ ಎಂದಾಗ ಬಹುತೇಕ ಮುಖಂಡರು ತಮ್ಮ ಸಂತೋಷ ವ್ಯಕ್ತಪಡಿಸಿದರು.



ಮತ್ತುಬಾನುವಳ್ಳಿಯಲ್ಲಿಪ್ರತಿಮೆತೆರವುಮಾಡಿದ ಬಗ್ಗೆ ತಮ್ಮ ಸ್ಪಷ್ಟನೆ ಬೇಕೆಂದು ಮುಖಂಡರು ಒತ್ತಾಯಿಸಿದರು. ಈ ವೇಳೆ ಜಿಲ್ಲಾಧಿಕಾರಿಯವರು ಮಾತನಾಡಿ ಈ ವಿಷಯದಲ್ಲಿ ಕಾನೂನು ಪಾಲನೆ ಮಾಡಲಾಗಿದೆ ಎಂದ ಅವರು ಅಧಿಕಾರಿಗಳು ಸಮಸ್ಯೆಯನ್ನು ಇತ್ಯಾರ್ಥ ಮಾಡುವಾಗ ಸಂವೇದನಾಶೀಲತೆಯಿಂದ ಕೆಲಸ ಮಾಡಿದಾಗ ಮಾತ್ರ ಸಾರ್ವಜನಿಕರ ಸಮಸ್ಯೆಗಳನ್ನು ನಿವಾರಣೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಹಾಸ್ಟೆಲ್ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಲ್ಲಾ ಇಲಾಖೆಗಳಿಂದ 15 ಹಾಸ್ಟೆಲ್‌ಗಳಿಗೆ ನಿವೇಶನ ಮಂಜೂರು ಮಾಡಿ ಪಹಣಿಯನ್ನು ಮಾಡಲಾಗಿದೆ. ಸಮಾಜದ ಬದಲಾವಣೆಗೆ ಶಿಕ್ಷಣ ಪ್ರಮುಖವಾಗಿದ್ದು ಈ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ, ಪ.ಪಂಗಡದ ವಿದ್ಯಾರ್ಥಿಗಳು ಹಾಸ್ಟೆಲ್ ಪ್ರವೇಶಕ್ಕೆ ಬಂದಾಗ ನಿರಾಕರಣೆ ಮಾಡದೆ ಪ್ರವೇಶ ಕಲ್ಪಿಸಲಾಗಿದೆ. ಪ್ರತಿ ಗ್ರಾಮದಲ್ಲಿಯು ಸ್ಮಶಾನ ಇದ್ದು ಇದನ್ನು ಅಭಿವೃದ್ದಿ ಮಾಡುವ ಮೂಲಕ ಲ್ಯಾಂಡ್ ಬೀಟ್ ಮಾಡಲಾಗುತ್ತದೆ.


ಜಗಳೂರು ತಾ; ಕೆಚ್ಚೇನಹಳ್ಳಿಯಲ್ಲಿ ಸಾಮಾಜಿಕ ಬಹಿಷ್ಕಾರ, ಅಸ್ಪೃಶ್ಯತೆ ಆಚರಣೆ ಇದೆ ಎಂದು ದಲಿತ ಮುಖಂಡರು ಹೇಳುತ್ತಿದ್ದು ಈಗಲೂ ಇದು ಆಚರಣೆಯಲ್ಲಿದ್ದರೆ ನಾಗರಿಕ ಸಮಾಜ ತಲೆತಗ್ಗಿಸುವಂತದ್ದಾಗಿದ್ದು ಉಪವಿಭಾಗಾಧಿಕಾರಿ ಹಾಗೂ ಪೊಲೀಸ್ ಉಪಾಧೀಕ್ಷಕರನ್ನು ಗ್ರಾಮಕ್ಕೆ ಕಳುಹಿಸಿ ತನಿಖೆ ಮಾಡಿ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಬಗರ್‌ಹುಕ್ಕುಂ ಜಮೀನು ಮಂಜೂರಾತಿ, ಇ–ಸ್ವತ್ತು, ನಕಾಶೆ ರಸ್ತೆ ಒತ್ತುವರಿ, ಸಿಜಿ ಆಸ್ಪತ್ರೆಯಲ್ಲಿ ಹೊರಗುತ್ತಿಗೆಯನ್ನು ನೇರಪಾವತಿ ಮೂಲಕ ಸಿಬ್ಬಂದಿ ನೇಮಕ ಸೇರಿದಂತೆ ಅನೇಕ ಕುಂದುಕೊರತೆಗಳ ಬಗ್ಗೆ ಅನೇಕ ಮುಖಂಡರು ಸಭೆಯಲ್ಲಿ ಪ್ರಸ್ತಾಪಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಅವರು ಗ್ರಾಮಗಳಲ್ಲಿ ಆಗಬೇಕಾದ ಕಾಮಗಾರಿಗಳು, ಅಂಗನವಾಡಿ ಕಳಪೆ, ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳ ಮೇಲೆ ಕರ್ತವ್ಯ ಲೋಪದ ಬಗ್ಗೆ ತಿಳಿಸಿದ್ದು ಕ್ರಮ ಕೈಗೊಳ್ಳಲಾಗುತ್ತದೆ. ಮತ್ತು ಕೆಲವು ಗ್ರಾಮಗಳಲ್ಲಿ ನಿವೇಶನ, ಕುಡಿಯುವ ನೀರಿನ ಪೂರೈಕೆ ಬಗ್ಗೆ ತುರ್ತು ಕ್ರಮ ಜರುಗಿಸಲಾಗುತ್ತದೆ ಎಂದರು.

ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್ ಮಾತನಾಡಿ ಜಾತ್ರೆ ಸಂದರ್ಭದಲ್ಲಿ ಅಲೆಮಾರಿಗಳು ಮಕ್ಕಳಿಗೆ ಆಟಗಳನ್ನು ಆಡಿಸುವರು. ಈ ವೇಳೆ ಪೊಲೀಸ್ ಸಿಬ್ಬಂದಿ ಅನುಮತಿ ನೀಡಲು ಹಣ ಕೇಳುತ್ತಾರೆ ಮತ್ತು ದೌರ್ಜನ್ಯ ಪ್ರಕರಣಗಳ ಬಗ್ಗೆ ಜನರು ಪ್ರಸ್ತಾಪಿಸಿದ್ದು ಯಾವುದೇ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಪೊಲೀಸ್ ಠಾಣೆಗೆ ಹೋಗಿ ದೂರು ದಾಖಲಿಸಬೇಕು ಮತ್ತು ಜಾತ್ರೆಗಳಲ್ಲಿ ಮನರಂಜನ ಆಟವಾಡಿಸಲು ಹಣ ಕೇಳಿದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಲು ತಿಳಿಸಿದರು.

ನ್ಯಾಮತಿ ತಾಲ್ಲೂಕಿನ ಜಯಮ್ಮ ಎಂಬ ವೃದ್ದ ಮಹಿಳೆ ತನ್ನ ಮಕ್ಕಳು ನನ್ನ ಜಮೀನಿನ ಎಲ್ಲಾ ದಾಖಲೆಗಳನ್ನು ಪಡೆದು ನನಗೆ ಮನೆಯಿಂದ ಹೊರಗೆ ಹಾಕಿದ್ದಾರೆ.



**ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ಕಡಬನಕಟ್ಟೆ ಗ್ರಾಮದಲ್ಲಿ ನಡೆದ ಶ್ರೀ ಆಂಜನೇಯಸ್ವಾಮಿ ರಥೋತ್ಸವದಲ್ಲಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅವರು ಪಾಲ್ಗೊಂಡು ಉತ್ತಮ ಮಳೆಯಾಗಲಿ ಎಂದು ಪ್ರಾರ್ಥಿಸಿ ಆಂಜನೇಯಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೀಪಾ ಮಹೇಶ್, ಸದಸ್ಯರಾದ ರಾಧ ತಿಪ್ಪೇಸ್ವಾಮಿ ಹಾಜರಿದ್ದರು.**

## ಪ್ರಮುಖ ಸುದ್ದಿ

### ನಾಗರಿಕ ಸೌಹಾರ್ದ ಸಭೆ

# ಸಮಾಜದಲ್ಲಿ ಕಾನೂನು ಪಾಲನೆ, ಶಾಂತತೆ ಮುಖ್ಯ: ಎಸ್ಪಿ

» **ದಾವಣಗೆರೆ**

ಹಬ್ಬಗಳನ್ನು ನಾವೆಲ್ಲರೂ ಸೌಹಾರ್ದತೆ, ಸಂಬಂಧ, ಮತ್ತು ಬಾಂಧವ್ಯಗಳನ್ನು ಕಾಪಾಡಿಕೊಳ್ಳುವುದಕ್ಕಾಗಿ ಆಚರಣೆ ಮಾಡಲಿದ್ದು ಇದಕ್ಕೆ ಪೂರಕವಾಗಿ ಕಾನೂನು ಪಾಲನೆ ಮತ್ತು ಶಾಂತತೆಯನ್ನು ಕಾಪಾಡಿಕೊಳ್ಳಬೇಕೆಂದು ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ ತಿಳಿಸಿದರು.



ಅವರು ಬುಧುವಾರ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗದಲ್ಲಿ ಮುಂಬರುವ ದುರ್ಗಾಂಬ ಜಾತ್ರೆ, ಹೋಳಿ ಹಬ್ಬಗಳ ಹಿನ್ನಲೆಯಲ್ಲಿ ನಡೆಸಲಾದ ನಾಗರಿಕ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಂದಿನ ಕೆಲವೇ ದಿನಗಳಲ್ಲಿ ಚುನಾವಣೆ ಯಾವಾಗ ಬೇಕಾದರೂ ಘೋಷಣೆಯಾಗಬಹುದು. ಆದ್ದರಿಂದ ನಾವುಗಳು ಈ ಹಬ್ಬಗಳನ್ನು ಮಾಡುವ ಸಂದರ್ಭದಲ್ಲಿ ನೀತಿ ಸಂಹಿತೆ ಜಾರಿಗೆಯಾಗಬಹುದು. ಈ ನಿಟ್ಟಿನಲ್ಲಿ ಸಂಹಿತೆ ಜಾರಿ ಆಗಿದ್ದಾಗ ಚುನಾವಣೆಗೆ ಸಂಬಂಧಪಟ್ಟ ನಿಯಮಗಳು ಇರುತ್ತವೆ. ಅವುಗಳನ್ನು ನಾವೆಲ್ಲರೂ ಕೂಡ ಕಟ್ಟುನಿಟ್ಟಿನಿಂದ ಪಾಲಿಸಬೇಕು ಹಾಗೂ ನೀತಿ ಸಂಹಿತೆಗೆ ಅನುಗುಣವಾಗಿ ಆಚರಣೆ ಮಾಡಬೇಕಾಗುತ್ತದೆ ಎಂದರು.

ಈ ನಾಲ್ಕು ಹಬ್ಬಗಳು ವಿಶೇಷವಾಗಿ ನಡೆಯುವುದರಿಂದ ಸಾಮಾಜಿಕ ಜಾಲತಾಣಗಳಲ್ಲಿ ನಾವು ಈಗಾಗಲೇ ಸಾಮಾಜಿಕ ಜಾಲತಾಣಗಳ ಮೇಲ್ವಿಚಾರಣೆ ಮಾಡಲು ಪ್ರತಿ ಠಾಣಾ ಮತ್ತು ಜಿಲ್ಲಾ ಕಚೇರಿಯಲ್ಲಿ ಕೂಡ ಇದನ್ನು ಅಳವಡಿಸಲಾಗಿದೆ. ಆದ್ದರಿಂದ ಯುವಕರು, ಸಾರ್ವಜನಿಕರು ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಚೋದನೆ ನೀಡುವ ಪೋಸ್ಟ್ ಹಾಕುವುದಾಗಲಿ ಅಥವಾ ಫೇಕ್ ನ್ಯೂಸ್ ಮಾಡುವುದಾಗಲಿ ಅಥವಾ ಇನ್ಯಾವುದೇ ಅಚಾತುರ್ಯ ಘಟನೆಗಳನ್ನಾಗಲಿ ಮಾಡಿದಲ್ಲಿ ಕಾನೂನು ರೀತಿ ಕ್ರಮ ಜರುಗಿಸಲಾಗುವುದು ಎಂದರು.ಹೋಳಿ ಹಬ್ಬ ಬರುವುದರಿಂದ ಯಾರೂ ಕೂಡ ಒತ್ತಾಯ ಪೂರ್ವಕವಾಗಿ ಸಾರ್ವಜನಿಕರಿಗೆ ಬಣ್ಣ ಹಚ್ಚುವುದು ಹಾಗೂ ಪಿಯುಸಿ ಪರೀಕ್ಷೆಗೆ ಹೋಗುತ್ತಿರುವ ವಿದ್ಯಾರ್ಥಿಗಳಿಗೆ ಬಣ್ಣ ಹಾಕುವುದು ಅಥವಾ ಹಾನಿಕಾರಕ ರಾಸಾಯಿನಿಕ ಬಳಸುವುದರಿಂದ ಚರ್ಮ, ಕಣ್ಣುಗಳಿಗೆ ತೊಂದರೆಯಾಗುತ್ತದೆ. ಹಾನಿಕಾರಕ ರಾಸಾಯಿನಿಕ ಬಳಸಬಾರದು ಮತ್ತು ಹೋಳಿಗಾಗಿ ಒತ್ತಾಯವಾಗಿ ಹಣ ವಸೂಲಿ ಮಾಡಬಾರದು. ಸಾರ್ವಜನಿಕರ ನೀರಿನ ಮೂಲಗಳ ಅಥವಾ ಸ್ಥಳಗಳಲ್ಲಿ ಬಣ್ಣ ಸೇರ್ಪಡೆ ಮಾಡುವುದು, ಮತ್ತು ಮಹಿಳೆಯರ ನಿಲಯಗಳಿಗೆ ಹೋಗಿ ತೊಂದರೆ ಮಾಡುವುದು, ಅಸಭ್ಯವಾಗಿ ವರ್ತನೆ ಮಾಡುವುದು, ಮದ್ಯಪಾನ ಸೇವಿಸಿ ಚಾಲನೆ ಮಾಡುವುದು, ಇದು ಯಾವುದು ಕೂಡ ನಡೆಯಬಾರದು. ಇಂತಹ ಘಟನೆಗಳು ಕಂಡು ಬಂದಲ್ಲಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಸಭೆಯಲ್ಲಿ ಅಪಾರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್. ಬಳ್ಳಾರಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T